ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೯

**ಪಟ್ಟಿ – ೦೬**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೇಯ ಅಧಿವೇಶನ**

**ಶುಕ್ರವಾರ, ದಿನಾಂಕ : ೦೫ನೇ ಫೆಬ್ರವರಿ, ೨೦೨೧**

---

## ಸಮೂಹ – V

೧. ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಪಶುಸಂಗೋಪನೆ ಸಚಿವರು.

೪. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

೫. ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

೬. ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು.

೭. ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು.

---

## ಬೀದರ್ ಜಿಲ್ಲೆಯ ಎನ್.ಇ.ಕೆ.ಆರ್.ಟಿ.ಸಿ ಚಾಲಕ–ನಿರ್ವಾಹಕರಿಗೆ ವಸತಿ ಗೃಹದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೧೧೦ (೫೫೭) ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಎನ್.ಇ.ಕೆ.ಆರ್.ಟಿ.ಸಿ ಚಾಲಕ–ನಿರ್ವಾಹಕರುಗಳಿಗೆ ವಸತಿ ಗೃಹ (Quarters) ನಿರ್ಮಾಣ ಮಾಡುವ ಯೋಜನೆಯು ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ವೃದ್ಧಾಶ್ರಮಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೧೧೧ (೫೫೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೀದರ್ ಜಿಲ್ಲೆಯಲ್ಲಿ ನಡೆಯುತ್ತಿರುವ ವೃದ್ಧಾಶ್ರಮ, ಡೇ–ಕೇರ್ ಸೆಂಟರ್, ಅನಾಥ ಮಕ್ಕಳ ಕುಟೀರ, ಸಾಂತ್ವನ ಕೇಂದ್ರಗಳು ಕೇವಲ ನಾಮಕವಾಸ್ತೆ ಮಾತ್ರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅಂತಹ ಸಂಸ್ಥೆಗಳಾವುವು; ಕ್ಷೇತ್ರವಾರು ವಿವರ ನೀಡುವುದು; ಮತ್ತು ಇಂತಹ ಸಂಸ್ಥೆಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮವೇನು; ಸದರಿ ಸಂಸ್ಥೆಗಳಿಗೆ ೨೦೧೭ ರಿಂದ ೨೦೨೧ರವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ವಕ್ಫ್ ಮಂಡಳಿಗೆ ಸೇರಿದ ಜಮೀನಿನ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೧೨ (೫೫೮) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲೆಯ ವಕ್ಫ್ ಮಂಡಳಿಗೆ ಸೇರಿದ ಜಮೀನಿನ ವಿಸ್ತೀರ್ಣ ಎಷ್ಟು; ಇದರಲ್ಲಿ ಖಾಸಗಿಯವರು ಎಷ್ಟು ಎಕರೆ ಜಮೀನನ್ನು ಅತಿಕ್ರಮಣ ಮಾಡಿಕೊಂಡಿದ್ದಾರೆ ; ಇಂತಹ ಪ್ರಕರಣಗಳೆಷ್ಟು; ಅತಿಕ್ರಮಣ ಮಾಡಿಕೊಂಡಿದವರ ವಿರುದ್ಧ ಸರ್ಕಾರ ತೆಗೆದಕೊಂಡ ಕ್ರಮವೇನು; (ಕ್ಷೇತ್ರವಾರು ವಿವರವಾದ ಮಾಹಿತಿ ನೀಡುವುದು)

(ಆ) ಬೀದರ್ ನಗರದಲ್ಲಿ ವಕ್ಫ್ ಜಮೀನಿನಲ್ಲಿ ಅಲ್ಪಸಂಖ್ಯಾತರ ವಸತಿ ನಿಲಯವನ್ನು ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಯಾವ ನಿಯಮದಡಿ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಇಲಾಖೆಯಿಂದ ವಿವಿಧ ಯೋಜನೆಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೧೩ (೫೬೦) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ ರಿಂದ ೨೦೨೦ನೇ ಸಾಲಿನ ಅವಧಿಯಲ್ಲಿ ಬೀದರ್ ಜಿಲ್ಲೆಯಲ್ಲಿ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಅವು ಯಾವುವು; ಪ್ರಸ್ತುತ ಯಾವ ಹಂತದಲ್ಲಿವೆ; ಅವುಗಳಿಗೆ ಬಿಡುಗಡೆ ಮಾಡಲಾದ ಅನುದಾನ ಎಷ್ಟು; (ವಿವರ ಒದಗಿಸುವುದು)

(ಆ) ೨೦೧೩ ರಿಂದ ೨೦೧೮ನೇ ಸಾಲಿನ ಅವಧಿಯಲ್ಲಿ ಕ್ರಿಶ್ಚಿಯನ್ ಅಭಿವೃದ್ಧಿ ಮಂಡಳಿಗೆ ಮೀಸಲಿಟ್ಟಿದ್ದ ಅನುದಾನ ಎಷ್ಟು; ಪ್ರಸ್ತುತ ಎಷ್ಟು ಅನುದಾನ ಮೀಸಲಿಡಲಾಗಿದೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ವಿವಿಧ ಯೋಜನೆಗಳ ಕಾಮಗಾರಿ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೧೪ (೫೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಗ್ರಾಮೀಣ ನೀರು ಸರಬರಾಜಿಗೆ ಮಂಜೂರಾದ ಅನುದಾನ ಎಷ್ಟು; ವಿವರವಾದ ಮಾಹಿತಿ ನೀಡುವುದು ; ಕಾಮಗಾರಿಗಳು ಯಾವ ಹಂತದಲ್ಲಿವೆ; ಅದರ ಸಮಗ್ರವಾದ ಮಾಹಿತಿ ಒದಗಿಸುವುದು;

(ಆ) ಸುವರ್ಣ ಗ್ರಾಮೋದಯ, ಗ್ರಾಮ ವಿಕಾಸ, ಮುಖ್ಯಮಂತ್ರಿ ಗ್ರಾಮ ವಿಕಾಸ ಯೋಜನೆಗೆ ೨೦೧೯–೨೦ನೇ ಸಾಲಿನಲ್ಲಿ ಮಂಜೂರಾದ ಅನುದಾನ ಎಷ್ಟು ? (ವಿವರವಾದ ಮಾಹಿತಿ ನೀಡುವುದು)

## ಮಹಿಳಾ ಮತ್ತು ಮಕ್ಕಳ ಇಲಾಖೆಯಡಿ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧೫ (೫೩೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಮಂಡ್ಯ ಜಿಲ್ಲೆಯ ಮಹಿಳಾ ಆಯೋಗಕ್ಕೆ ಬಂದಿರುವ ದೂರುಗಳ ಸಂಖ್ಯೆ ಎಷ್ಟು ; ಈ ಪೈಕಿ ಇತ್ಯರ್ಥಪಡಿಸಲಾಗಿರುವ ದೂರುಗಳು ಎಷ್ಟು ; ಇತ್ಯರ್ಥಪಡಿಸಲು ಬಾಕಿ ಇರುವ ದೂರುಗಳ ಸಂಖ್ಯೆ ಎಷ್ಟು ;

(ಆ) ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿವೆ ; ಇದರಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು ; ಇವರಿಗೆ ಆಹಾರವನ್ನ ಯಾವ ಮಾನದಂಡದ ಆಧಾರದಲ್ಲಿ ನೀಡಲಾಗುವುದು ; (ಪೂರ್ಣ ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಮಂಡ್ಯ ಜಿಲ್ಲೆಯಲ್ಲಿ ಉದ್ಯೋಗಿನಿ ಯೋಜನೆಯಡಿಯಲ್ಲಿ ಸಾಲ ಕೋರಿ ಸಲ್ಲಿಸಿರುವ ಅರ್ಜಿಗಳೆಷ್ಟು ; ಇದರಲ್ಲಿ ಮಂಜೂರಾದ ಸಂಖ್ಯೆ ಎಷ್ಟು ; ಅನುದಾನ ಬಿಡುಗಡೆಗೊಳಿಸಲಾದ ಅರ್ಜಿಗಳು ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಇಲಾಖೆಯಲ್ಲಿ ಮಾಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲ ಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ಇರುವ ಯೋಜನೆಗಳು ಯಾವುವು ಹಾಗೂ ಅರ್ಹತೆಗಳೇನು ; ಕಳೆದ ೩ ವರ್ಷಗಳಿಂದ ಇದರ ಅನುಷ್ಠಾನಕ್ಕಾಗಿ ಮಂಡ್ಯ ಜಿಲ್ಲೆಗೆ ನೀಡಲಾದ ಅನುದಾನ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧೬ (೫೩೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಸ್ಥಾಪಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಶುದ್ಧ ಕುಡಿಂಯುವ ನೀರಿನ ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಘಟಕಗಳು ; ಕಾರ್ಯನಿರ್ವಹಿಸದ ಘಟಕಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆ ಸಂಬಂಧ ಮಂಡ್ಯ ಜಿಲ್ಲೆಯಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಇಲಾಖಾ/ ಉನ್ನತ ಮಟ್ಟದ ತನಿಖೆ ನಡೆಸಲಾಗಿದೆಯೇ ? (ತನಿಖಾ ವರದಿಯನ್ನು ನೀಡುವುದು)

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಖಾಲಿ ಇರುವ ಹುದ್ದೆಗಳ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧೭ (೫೨೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ / ನೌಕರರ ಸಂಖ್ಯೆ ಎಷ್ಟು ; (ಜಿಲ್ಲಾವಾರು / ಹುದ್ದೆವಾರು ವಿವರ ನೀಡುವುದು)

(ಆ) ಸದರಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು / ಹುದ್ದೆವಾರು ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಎಷ್ಟು ಸಮಯದೊಳಗೆ ಭರ್ತಿ ಮಾಡಲಾಗುವುದು ;

(ಈ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಇರುವ ಮಾನದಂಡಗಳೇನು ? (ಹುದ್ದೆವಾರು ಸಂಪೂರ್ಣ ವಿವರ ನೀಡುವುದು)

## ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಹೊಸದಾಗಿ ಮಂಜೂರು ಮಾಡಲಾಗಿರುವ ಪಶು ಚಿಕಿತ್ಸಾಲಯಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧೮ (೫೨೯) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಹೊಸದಾಗಿ ಮಂಜೂರು ಮಾಡಲಾಗಿರುವ ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು ; ಹಾಗೂ ಎಷ್ಟು ಪಶು ಚಿಕಿತ್ಸಾಲಯಗಳನ್ನು ಉನ್ನತೀಕರಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳನ್ನು ಉನ್ನತೀಕರಿಸಲು ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೊಸದಾಗಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಪಶು ಚಿಕಿತ್ಸಾಲಯಗಳು ಎಷ್ಟು ? (ವಿವರ ನೀಡುವುದು)

## ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧೯ (೫೫೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಹುತೇಕ ಹಳ್ಳಿಗಳಲ್ಲಿ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಿಂದ ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕುಡಿಯುವ ನೀರು ಪೊರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿ ಈಗ ಕಾರ್ಯಗತಗೊಂಡಿರುವ ಹಾಗೂ ಕಾರ್ಯಗತಗೊಳಿಸುತ್ತಿರುವ ಕುಡಿಯುವ ನೀರಿನ ಯೋಜನೆಗಳಾವುವು;

(ಇ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಟ್ಯಾಂಕರುಗಳ ಮೂಲಕ ಕುಡಿಯುವ ನೀರು ಪೂರೈಸಲು ವ್ಯಯವಾಗಿರುವ ಹಣವೆಷ್ಟು ? (ವಿವರ ಒದಗಿಸುವುದು)

## ಸ್ವಯಂ ಉದ್ಯೋಗ ಮಾಡಲು ಮಹಿಳೆಯರಿಗೆ ನೀಡುವ ಸಾಲ/ ಸಬ್ಸಿಡಿ ಕುರಿತು

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨೦ (೫೫೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಮಹಿಳೆಯರಿಗೆ ಸ್ವಯಂ ಉದ್ಯೋಗ ಮಾಡಲು ಯಾವ ಯಾವ ಯೋಜನೆಗಳಿವೆ; ಯಾವ ರೀತಿ ಧನ ಸಹಾಯ ಮಾಡಲಾಗುವುದು;

(ಆ) ಯಾವ ಯಾವ ಯೋಜನೆಗಳಲ್ಲಿ ಎಷ್ಟೆಷ್ಟು ಸಾಲ/ಸಬ್ಸಿಡಿ ನೀಡಲಾಗುತ್ತದೆ; ಎಷ್ಟು ಫಲಾನುಭವಿಗಳಿಗೆ ಎಷ್ಟು ಹಣವನ್ನು ಕಳೆದ ಎರಡು ವರ್ಷಗಳಲ್ಲಿ ನೀಡಲಾಗಿದೆ;

(ಇ) ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳೇನು ?

## ಪಂಚಾಯತ್ ಕಾರ್ಯದರ್ಶಿಗಳ ಕುರಿತ ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೧ (೫೪೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗ್ರೇಡ್–೧ ಪಂಚಾಯುತ್ ಕಾರ್ಯದರ್ಶಿಗಳ ಸಂಖ್ಯೆ ಎಷ್ಟು ;

(ಆ) ಗ್ರೇಡ್–೧ ಪಂಚಾಯುತ್ ಕಾರ್ಯದರ್ಶಿಗಳಿಗೆ ಬಡ್ತಿ ಆದೇಶಗಳಿದ್ದರೂ, ಬಡ್ತಿ ಕೊಡದಿರಲು ಕಾರಣವೇನು ; ಬಡ್ತಿ ಹೊಂದಲು ಖಾಲಿ ಇರುವ ಹುದ್ದೆಗಳೆಷ್ಟು ;

(ಇ) ಎಷ್ಟು ಮಂದಿ ಗ್ರೇಡ್–೨ ಕಾರ್ಯದರ್ಶಿಗಳಿಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪ್ರಭಾರ) ಚಾರ್ಜ್ ನೀಡಲಾಗಿದೆ ;

(ಈ) ಗ್ರೇಡ್–೧ ಪಂಚಾಯತ್ ಕಾರ್ಯದರ್ಶಿಗಳಿಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾಗಿ (ಪ್ರಭಾರ) ಚಾರ್ಜ್ ನೀಡದಿರಲು ಕಾರಣವೇನು ?

## ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕುರಿತ ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೨ (೫೪೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಗ್ರಾಮ ಪಂಚಾಯತ್‌ಗಳು ಎಷ್ಟು ; ಎಲ್ಲಾ ಗ್ರಾಮ ಪಂಚಾಯತ್‌ಗಳಿಗೆ ಪೂರ್ಣ ಪ್ರಮಾಣದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಇದ್ದಾರೆಯೇ ; ಇಲ್ಲವಾದ್ದಲ್ಲಿ, ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳೆಷ್ಟು ; ಹಾಗೂ ಹೆಚ್ಚುವರಿ ಚಾರ್ಜ್‌ನಲ್ಲಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಎಷ್ಟು ? (ಈ ಕುರಿತಂತೆ ಸಂಪೂರ್ಣ ಮಾಹಿತಿ ಒದಗಿಸುವುದು)

## ವಿದ್ಯಾರ್ಥಿಗಳ ಬಸ್ ಪಾಸ್ ಅವಧಿಯ ವಿನಾಯಿತಿ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೩ (೫೦೬) ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) Whether student's yearly concession pass issued by BMTC and KSRTC is valid after annual examination;

(ಆ) Will the Minister direct the BMTC and KSRTC to mandatorily extend the validity of the Students concession pass for a year from the date of issue of such passes in the interest of Students?

## ಕೈಮಗ್ಗ ಮತ್ತು ವಿದ್ಯುತ್ ಮಗ್ಗಗಳನ್ನು ಅವಲಂಬಿಸಿರುವವರ ಬಗ್ಗೆ.

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೪ (೫೭೦) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಇರುವ ಕೈಮಗ್ಗ ಮತ್ತು ವಿದ್ಯುತ್ ಮಗ್ಗಗಳ ಸಂಖ್ಯೆ ಎಷ್ಟು;

(ಆ) ಕೈಮಗ್ಗ ಮತ್ತು ವಿದ್ಯುತ್ ಮಗ್ಗಗಳ ಕುಲಕಸುಬನ್ನು ಅವಲಂಬಿಸಿರುವವರ ಸಂಖ್ಯೆ ಎಷ್ಟು;

(ಇ) ಇವರಿಗಾಗಿ ಸರ್ಕಾರ ಪ್ರತಿ ವರ್ಷ ಆಯವ್ಯಯದಲ್ಲಿ ಮೀಸಲಿರಿಸುತ್ತಿರುವ ಅನುದಾನವೆಷ್ಟು;

(ಈ) ಈ ಅನುದಾನದಲ್ಲಿ ಹಮ್ಮಿಕೊಂಡಿರುವ ಯೋಜನೆಗಳಾವುವು ?

## ಅಲ್ಪಸಂಖ್ಯಾತರಿಗಾಗಿ ಯೋಜನೆಗಳು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೫ (೫೬೯) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಅಲ್ಪಸಂಖ್ಯಾತರಿಗಾಗಿ ರೂಪಿಸಿರುವ ಕಾರ್ಯಕ್ರಮಗಳಾವುವು; ಇದರಲ್ಲಿ ಅಲ್ಪಸಂಖ್ಯಾತರಿಗಾಗಿ ಮನೆ ನಿರ್ಮಾಣ ಯೋಜನೆ ಕಾರ್ಯಕ್ರಮವು ಸೇರಿದೆಯೇ;

(ಆ) ಸೇರಿದ್ದಲ್ಲಿ, ಇದಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಒದಗಿಸಿದ ಅನುದಾನವೆಷ್ಟು; ಅದರಲ್ಲಿ ಎಷ್ಟು ಬಳಕೆಯಾಗಿದೆ ?

## ಗ್ರಾಮೀಣ ಭಾಗದ ಪ್ರದೇಶಗಳಲ್ಲಿ ಕುಡಿಯುವ ನೀರಿನ ಯೋಜನೆ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೬ (೫೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಭಾಗಗಳಿಗೆ ಕುಡಿಯುವ ನೀರನ್ನು ಒದಗಿಸಲು ಇರುವ ಯೋಜನೆಗಳಾವುವು;

(ಆ) ಯಾವ ಯಾವ ಮೂಲಗಳಿಂದ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ;

(ಇ) ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಈವರೆಗೆ ಎಷ್ಟು ಗ್ರಾಮಗಳಲ್ಲಿ ಅಳವಡಿಸಲಾಗಿದೆ;

(ಈ) ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆಗಾಗಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹಣ ವ್ಯಯಿಸಲಾಗಿದೆ ?

## ಪಶುವೈದ್ಯ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨೭ (೫೬೬) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆ ಎದುರಾಗಿರುವುದಾಗಿ ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪಶುಸಂಗೋಪನೆ ಇಲಾಖೆಗೆ ಔಷಧಿ ಖರೀದಿ ಮಾಡಲು ಸರ್ಕಾರದಿಂದ ಅನುಮತಿ ನೀಡಲಾಗಿದೆಯೇ;

(ಇ) ಪಶು ಔಷಧಿಗಳಿಗೆ ಇಡೀ ರಾಜ್ಯದಲ್ಲಿ ಏಕರೂಪದ ಬೆಲೆ ನಿಗದಿಪಡಿಸುವ ಬಗ್ಗೆ ಸರ್ಕಾರದ ನಿಲುವೇನು;

(ಈ) ಪಶು ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆಯಾಗದಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದಲ್ಲಿ ಬೆಳಕಿಗೆ ಬರುತ್ತಿರುವ ಬಾಲ್ಯವಿವಾಹ ಪದ್ಧತಿ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨೮ (೫೬೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಾಲ್ಯವಿವಾಹ ಪದ್ಧತಿ ನಿಯಮಬಾಹಿರವಾಗಿದ್ದರೂ ಸಹ ಇತ್ತೀಚೆಗೆ ಹಲವಾರು ಪ್ರಕರಣಗಳು ಬೆಳಕಿಗೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಾಲ್ಯ ವಿವಾಹಗಳಿಗೆ ತುತ್ತಾಗಿ ಎಷ್ಟು ಬಾಲಕಿಯರು ವಿಧವೆಯರಾಗಿದ್ದಾರೆ;

(ಇ) ಅವರುಗಳು ಮರು ಮದುವೆ ಆಗಲು ಮುಂದೆ ಬಂದಲ್ಲಿ, ಸರ್ಕಾರ ಅವರಿಗೆ ಹೇಗೆ ರಕ್ಷಣೆಯನ್ನು ಕೊಡುತ್ತದೆ;

(ಈ) ಎಷ್ಟು ಬಾಲ್ಯ ವಿವಾಹ ಪ್ರಕರಣಗಳನ್ನು ನ್ಯಾಯಾಲಯದಿಂದ ತಡೆಯಾಜ್ಞೆ ಪಡೆದು ನಿಲ್ಲಿಸಲಾಗಿದೆ ?

## ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಮಕ್ಕಳ ವಾರ್ಡ್ ಸಭೆಗಳನ್ನು ನಡೆಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೨೯ (೫೬೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣ ಪ್ರದೇಶದ ಮಕ್ಕಳ ಸಮಸ್ಯೆಗಳನ್ನು ಆಲಿಸಲು ರಾಜ್ಯದ ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ನವೆಂಬರ್ ತಿಂಗಳಿನಲ್ಲಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳನ್ನು ನಡೆಸಲು ೨೦೦೬ ರಲ್ಲಿ ಸುತ್ತೋಲೆ ಹೊರಡಿಸಲಾಗಿದ್ದು, ಪಟ್ಟಣ ಪ್ರದೇಶದ ಮಕ್ಕಳ ಸಮಸ್ಯೆಗಳನ್ನು ಆಲಿಸುವ ಕುರಿತು ಸರ್ಕಾರದ ಕ್ರಮವೇನು;

(ಆ) ಮಕ್ಕಳ ಗ್ರಾಮ ಸಭೆಗಳು ಕೇವಲ ಗ್ರಾಮೀಣ ಭಾಗಕ್ಕೆ ಮಾತ್ರ ಸೀಮಿತವಾಗಿದ್ದು, ನಗರವನ್ನು ಮಕ್ಕಳ ಸ್ನೇಹಿ ಮಾಡಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ನಗರ ಪ್ರದೇಶಗಳ ಪ್ರತಿ ವಾರ್ಡ್‌ಗಳಲ್ಲಿ ಇರುವ ಮಕ್ಕಳ ಸಂಖ್ಯೆಗಳ ಅಂಕಿ ಅಂಶ ಸರ್ಕಾರದ ಬಳಿ ಇದೆಯೇ; ತಿಂಗಳಲ್ಲಿ ಒಂದು ದಿನದ ಮಟ್ಟಿಗೆ ಮಕ್ಕಳ ವಾರ್ಡ್ ಸಭೆಗಳನ್ನು ನಡೆಸುವ ಕುರಿತು ಸರ್ಕಾರದ ನಿಲುವೇನು ?

## ಸಾರಿಗೆ ಇಲಾಖೆಯು ಸಾರ್ವಜನಿಕರಿಗೆ ಪರಿಣಾಮಕಾರಿ ಸೇವೆ ಸಲ್ಲಿಸಲು ಇರುವ ತೊಡಕುಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೩೦ (೫೬೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ರಸ್ತೆ ಸಾರಿಗೆ ನಿಗಮವು ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಯನ್ನು ಒದಗಿಸುವ ಹಿನ್ನೆಲೆಯಲ್ಲಿ, ನಾಲ್ಕು ವಿಭಾಗಗಳನ್ನು ಮಾಡಿದ್ದರೂ, ಈವರೆಗೂ ನಿರೀಕ್ಷಿತ ಫಲಿತಾಂಶ ಬಂದಿಲ್ಲವೆಂದು ಹೇಳಲಾಗುತ್ತಿದ್ದು, ಈ ಕುರಿತು ಸರ್ಕಾರದ ನಿಲುವೇನು;

(ಆ) ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಒಟ್ಟು ಇರುವ ವಾಹನಗಳ ಸಂಖ್ಯೆ ಎಷ್ಟು; (ವಿಭಾಗವಾರು ವಿವರ ನೀಡುವುದು)

(ಇ) ಈ ವಾಹನಗಳನ್ನು ಖರೀದಿಸಿದ ಎಷ್ಟು ವರ್ಷಗಳ ಅವಧಿಯ ನಂತರ ಸ್ಕ್ರ್ಯಾಪ್ (Scrap) ಮಾಡಲಾಗುವುದು;

(ಈ) ಸದರಿ ವಾಹನಗಳ ಸಂಚಲನಕ್ಕೆ ಪ್ರತಿ ಕಿ.ಮೀ.ಗೆ ತಗಲುವ ವೆಚ್ಚವೆಷ್ಟು?

## ಮಂಡ್ಯ ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆ ನಡೆಯದಿರುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೪೩೧ (೫೧೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲಾ ಪಂಚಾಯಿತಿಯ ಸಾಮಾನ್ಯ ಸಭೆಯು ಕೋರಂ ಅಭಾವದಿಂದ ಸೆಪ್ಟೆಂಬರ್–೨೦೧೯ ರಿಂದ ನಡೆಯದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದುವರೆವಿಗೂ ಸಾಮಾನ್ಯ ಸಭೆ ನಡೆಯದೆ ಜಿಲ್ಲೆಯ ಅಭಿವೃದ್ಧಿ ಕಾರ್ಯಕ್ರಮಗಳು ಸಂಪೂರ್ಣವಾಗಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಾದರೆ, ಜಿಲ್ಲಾ ಪಂಚಾಯಿತಿಯ ಸಮಗ್ರ ಅಭಿವೃದ್ಧಿಗಾಗಿ ಯಾವ ಬದಲಿ ವ್ಯವಸ್ಥೆಯನ್ನು ಮಾಡಲಾಗಿದೆ;

(ಈ) ಮಂಡ್ಯ ಜಿಲ್ಲಾ ಪಂಚಾಯಿತಿಯ ಈ ರೀತಿಯ ಆಡಳಿತ ಕಾರ್ಯವ್ಯವಸ್ಥೆ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ?

## ವಿಶೇಷ ಚೇತನರಿಗೆ ಮೀಸಲಾತಿ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೪೩೨ (೫೧೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಗಳಲ್ಲಿ ಉದ್ಯೋಗ ನೀಡುವಲ್ಲಿ ವಿಶೇಷ ಚೇತನರಿಗೆ ಮೀಸಲಾತಿ ಕಲ್ಪಿಸುವ ಸಂಬಂಧ ಸುಪ್ರೀಂ ಕೋರ್ಟಿನಿಂದ ತೀರ್ಪು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ತೀರ್ಪಿನಲ್ಲಿ ಇರುವ ಮುಖ್ಯಾಂಶಗಳೇನು; (ವಿವರ ನೀಡುವುದು)

(ಇ) ಸದರಿ ಸುಪ್ರೀಂ ಕೋರ್ಟಿನ ತೀರ್ಪಿನ ಅನ್ವಯ ಇದುವರೆವಿಗೂ ಕೈಗೊಂಡ ಕ್ರಮಗಳೇನು?

## ಸನಿವಾಸಿ ವಸತಿ ಶಾಲೆಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೪೩೩ (೫೧೯) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸನಿವಾಸಿ ವಸತಿ ಶಾಲೆಗಳ ಸಂಖ್ಯೆ ಎಷ್ಟು;

(ಆ) ಸದರಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಾದರೆ, ಅವುಗಳಾವುವು;

(ಇ) ಸದರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕಾಲಮಿತಿ ವೇತನಬಡ್ತಿ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು; ಯಾವ ಕಾಲಮಿತಿಯಲ್ಲಿ ಕಾಲಮಿತಿ ವೇತನ ಬಡ್ತಿ ನೀಡಲಾಗುವುದು?

## ವಿದ್ಯಾರ್ಥಿಗಳಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೪೩೪ (೫೨೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈಗಾಗಲೇ ನಗರ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಶಾಲೆಗಳು ಪ್ರಾರಂಭವಾಗಿದ್ದು, ಅಲ್ಲಿನ ವಿದ್ಯಾರ್ಥಿಗಳಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ವಿದ್ಯಾರ್ಥಿಗಳಿಗೆ ಬಸ್ ಪಾಸ್ ವ್ಯವಸ್ಥೆ ಕಲ್ಪಿಸುವಲ್ಲಿನ ಮಾನದಂಡಗಳೇನು;

(ಇ) ಕೋವಿಡ್–೧೯ ಸಂದಿಗ್ಧ ಪರಿಸ್ಥಿತಿಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯ ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ರಾಸುಗಳ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೪೩೫ (೫೨೪) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ರಾಸುಗಳ ಸಂಖ್ಯೆ ಎಷ್ಟು; (ತಳಿವಾರು ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ರಾಸುಗಳ ಸಂರಕ್ಷಣೆಗಾಗಿ ಒಟ್ಟು ಆಸ್ಪತ್ರೆಗಳ ಸಂಖ್ಯೆ ಎಷ್ಟು;

(ಇ) ಸದರಿ ಆಸ್ಪತ್ರೆಗಳಿಗೆ ಮಂಜೂರಾಗಿರುವ ವೈದ್ಯರ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಈ) ಪ್ರಸ್ತುತ ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; (ಪ್ರತ್ಯೇಕವಾಗಿ ವಿವರ ನೀಡುವುದು)

(ಉ) ರಾಜ್ಯದಲ್ಲಿ ಸರ್ಕಾರಿ ಹಾಗೂ ಖಾಸಗಿ ಗೋಶಾಲೆಗಳ ಸಂಖ್ಯೆ ಎಷ್ಟು;

(ಊ) ಸದರಿ ಗೋಶಾಲೆಗಳಲ್ಲಿ ಹಾಲಿ ಇರುವ ರಾಸುಗಳ ಸಂಖ್ಯೆ ಎಷ್ಟು; (ಪ್ರತ್ಯೇಕವಾಗಿ ವಿವರ ನೀಡುವುದು)

(ಋ) ರಾಜ್ಯದಲ್ಲಿ ಅಧಿಕೃತ ಕಸಾಯಿ ಖಾನೆಗಳು ಹಾಗೂ ಅನಧಿಕೃತ ಕಸಾಯಿ ಖಾನೆಗಳ ಸಂಖ್ಯೆ ಎಷ್ಟು?

## ಬೆಳಗಾವಿ ವಿಭಾಗದ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ):–**

೪೩೬ (೫೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ವಿಭಾಗ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನದ ಕಛೇರಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಅವುಗಳಲ್ಲಿ  ಖಾಯಂ, ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಉ) ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ; ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು; ಇಲ್ಲವಾದಲ್ಲಿ, ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು?

## ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ):–**

೪೩೭ (೫೨೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ, ಈ ಸಂಸ್ಥೆಯ ಅಧೀನದ ಕಛೇರಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಖಾಯಂ, ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಉ) ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ; ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು; ಇಲ್ಲವಾದಲ್ಲಿ, ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು?

## ಶೌಚಾಲಯಗಳ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೪೩೮ (೫೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಜಿಲ್ಲೆಯನ್ನು, ಬಯಲು ಬರ್ಹಿದೆಸೆ ಮುಕ್ತ ಜಿಲ್ಲೆಯನ್ನಾಗಿ ಘೋಷಣೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಸದರಿ ಜಿಲ್ಲೆಯಲ್ಲಿ ಕಳೆದ ೫ ವರ್ಷಗಳಿಂದ ಪಂಚಾಯತ್ ರಾಜ್ ಇಲಾಖೆಯಿಂದ ನಿರ್ಮಿಸಿದ ಶೌಚಾಲಯಗಳು ಎಷ್ಟು; (ಪಂಚಾಯಿತಿವಾರು ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಿಂದ ಪಂಚಾಯತ್ ರಾಜ್ ಇಲಾಖಾ ವತಿಯಿಂದ ನಿರ್ಮಿಸಿರುವ ಶೌಚಾಲಯಗಳ ಸಂಖ್ಯೆ ಎಷ್ಟು; (ಪಂಚಾಯಿತಿವಾರು ವಿವರ ನೀಡುವುದು)

(ಇ) ಮೇಲ್ಕಂಡ ಶೌಚಾಲಯ ದುಸ್ಥಿತಿಯಲ್ಲಿದ್ದು ಉಪಯೋಗಕ್ಕೆ ಬಾರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ?

## ಹಿರಿಯ ನಾಗರಿಕರಿಗೆ ಸರ್ಕಾರ ತಂದಿರುವ ಯೋಜನೆಗಳ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೪೩೯ (೫೩೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ವತಿಯಿಂದ ಹಿರಿಯ ನಾಗರಿಕರ ಅನುಕೂಲಕ್ಕಾಗಿ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳು ಯಾವುವು; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಈ ಯೋಜನೆಗಳಿಗಾಗಿ ವೆಚ್ಚ ಮಾಡಿರುವ ಹಣ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಅಂಗನವಾಡಿ ಕೇಂದ್ರಗಳ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೪೪೦ (೫೪೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಇರುವ ಮಾನದಂಡನೆಗಳೇನು;

(ಇ) ಈ ಅಂಗನವಾಡಿ ಕೇಂದ್ರಕ್ಕೆ ಬರುತ್ತಿರುವ ಮಕ್ಕಳ ಸಂಖ್ಯೆ ಎಷ್ಟು; ಹಾಗೂ ಇಲ್ಲಿ ಕೆಲಸ ಮಾಡುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ಈ ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯಕರ್ತೆಯರನ್ನು ನೇಮಿಸಿಕೊಳ್ಳಲು ಸರ್ಕಾರ ರೂಪಿಸಿರುವ ನಿಯಮಗಳೇನು; ಹಾಗೂ ಇವರಿಗೆ ನೀಡುತ್ತಿರುವ ಗೌರವಧನ ಎಷ್ಟು;

(ಉ) ರಾಜ್ಯದ ಕೆಲ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಪೌಷ್ಟಿಕ ಆಹಾರ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಿ.ಎಂ.ಜಿ.ಎಸ್.ವೈ. ಯೋಜನೆಯಡಿ ಅಭಿವೃದ್ಧಿಪಡಿಸಲಾದ ರಸ್ತೆಗಳ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೪೪೧ (೫೩೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಪಿ.ಎಂ.ಜಿ.ಎಸ್.ವೈ. (Pradhana Mantri Grameena Sadak Yojana) ಅಡಿಯಲ್ಲಿ ಅಭಿವೃದ್ಧಿಪಡಿಸಿದ ರಸ್ತೆಗಳ ವಿವರಗಳು, ಅಂದಾಜು ವೆಚ್ಚ, ಬಿಡುಗಡೆಯಾದ ಮೊತ್ತ ಹಾಗೂ ನಿರ್ಮಿಸಿದ ರಸ್ತೆಗಳ ವಿವರಗಳನ್ನು ನೀಡುವುದು ;

(ಆ) ೨೦೨೦–೨೦೨೧ನೇ ಸಾಲಿನಲ್ಲಿ ಪಿ.ಎಂ.ಜಿ.ಎಸ್.ವೈ. ಅಡಿಯಲ್ಲಿ ಕೇಂದ್ರ ಸರ್ಕಾರದಿಂದ ಅನುಮೋದನೆಯಾದ ಯೋಜನೆಗಳ ವಿವರಗಳನ್ನು ನೀಡುವುದು; ಇದಕ್ಕಾಗಿ ಬಿಡುಗಡೆಯಾದ ಹಣ ಎಷ್ಟು ? (ಯೋಜನೆಗಳ ವಿವರಗಳನ್ನು ಜಿಲ್ಲಾವಾರು ನೀಡುವುದು)

## ಕೋವಿಡ್‌-೧೯ ಮಹಾಮಾರಿಯಿಂದ ಆಟೋ& ಟ್ಯಾಕ್ಸಿ ಚಾಲಕರಿಗೆ ಸಹಾಯಧನ ಮಂಜೂರು ಮಾಡಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೪೪೨ (೫೧೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರವು ಈ ವರ್ಷದ ಮಾಹಮಾರಿ ಸಾಂಕ್ರಾಮಿಕ ರೋಗವಾದ ಕೋವಿಡ್‌-೧೯ರ ಪ್ರಭಾವಕ್ಕೆ ಒಳಗಾಗಿ ಕಷ್ಟ ಅನುಭವಿಸುತ್ತಿರುವ ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ರೂ. ೫,೦೦೦/- ಕನಿಷ್ಠ ಸಹಾಯ ಧನವನ್ನು ಘೋಷಿಸಿದ್ದು ಇದು ಸಾವಿರಾರು ಫಲಾನುಭವಿಗಳಿಗೆ ತಲುಪಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ಬಗ್ಗೆ ಕೈಗೊಂಡ ಕ್ರಮಗಳೇನು;

(ಆ) ಇಲ್ಲಿಯವರೆಗೆ ಎಷ್ಟು ಜನ ಫಲಾನುಭವಿಗಳಿಗೆ ಸಹಾಯಧನವನ್ನು ನೀಡಲಾಗಿದೆ;

(ಇ) ಇದಕ್ಕಾಗಿ ಮೀಸಲಿಟ್ಟ ಒಟ್ಟು ಪ್ರಮಾಣ ಎಷ್ಟು; ಇಲ್ಲಿಯವರೆಗೆ ಹಂಚಿಕೆಯಾದ ಹಾಗೂ ಬಾಕಿ ಉಳಿಸಿಕೊಂಡಿರುವ ಹಣವೆಷ್ಟು; (ಜಿಲ್ಲಾವಾರು ಅಂಕಿ ಅಂಶಗಳ ಸಹಿತ ಸಂಪೂರ್ಣ ವಿವರಣೆಯನ್ನು ನೀಡುವುದು)

## ವಿಕಲಚೇತನರಿಗೆ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೪೪೩ (೫೭೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇಲಾಖಾ ವತಿಯಿಂದ ವಿಕಲಚೇತನರಿಗಾಗಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಿಂದ ಎಷ್ಟು ಜನ ಫಲಾನುಭವಿಗಳು ಸದರಿ ಯೋಜನೆಯ ಸೌಲಭ್ಯಗಳನ್ನು ಪಡೆದುಕೊಂಡಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಿಕಲಚೇತನರ ಅಭಿವೃದ್ಧಿಗಾಗಿ ಸರ್ಕಾರವು ಎಷ್ಟು ಅನುದಾನವನ್ನು ಮೀಸಲಿಟ್ಟಿದೆ; ಇದುವರೆಗೂ ಖರ್ಚಾದ ಮೊತ್ತ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ನಗರ ಹಾಗೂ ಗ್ರಾಮಾಂತರ ಪ್ರದೇಶದ ವಿಕಲಚೇತನರಿಗೆ ಸರ್ಕಾರದ ಸೌಲಭ್ಯಗಳು ಪರಿಣಾಮಕಾರಿಯಾಗಿ ತಲುಪಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪಶುಸಂಗೋಪನೆಯಲ್ಲಿರುವ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೪ (೫೭೮) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶುಸಂಗೋಪನಾ ಇಲಾಖೆಯಲ್ಲಿ ಪಶು ವೈದ್ಯಾಧಿಕಾರಿಗಳ ಹುದ್ದೆಗಳು ಬಹುತೇಕ ಖಾಲಿ ಇದ್ದು ಪ್ರಸುತ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು : (ವಿವರ ನೀಡುವುದು)

(ಆ) ಹಿಂದಿನ ನೇಮಕಾತಿ ಪ್ರಕ್ರಿಯೆಯ ನಂತರ ಇಲ್ಲಿಯವರೆಗೆ ನಿವೃತ್ತಿ/ಸ್ವಯಂ ನಿವೃತ್ತಿ/ಅಕಾಲಿಕ ಮರಣ ಹೊಂದಿ ಖಾಲಿ ಉಳಿದಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಿಂದ ಬೇರೆ ರಾಜ್ಯಕ್ಕೆ ಹೋಗುವ ಬಸ್ಸುಗಳ ಪರವಾನಗಿ ಮೊತ್ತದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೫ (೫೭೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಮ್ಮ ರಾಜ್ಯದಿಂದ ಬೇರೆ ರಾಜ್ಯಕ್ಕೆ ಹೋಗುವ ಬಸ್‌ಗಳ ಪರವಾನಗಿ ಮೊತ್ತ ಎಷ್ಟು ;

(ಆ) ಬೇರೆ ರಾಜ್ಯದಿಂದ ನಮ್ಮ ರಾಜ್ಯಕ್ಕೆ ಬರುವ ವಾಹನಗಳಿಗೆ ಎಷ್ಟು ಪರವಾನಗಿ ಶುಲ್ಕ ಪಾವತಿಸಬೇಕು: ಶುಲ್ಕದ ಉದ್ದೇಶ ಏನು; ರಾಜ್ಯದಲ್ಲಿ ಎಲ್ಲೆಲ್ಲಿ ಸಾರಿಗೆ ಇಲಾಖೆಯ ಚೆಕ್ ಪೋಸ್ಟ್‌ಗಳಿವೆ ;

(ಇ) ಚೆಕ್‌ಪೋಸ್ಟ್‌ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಗ್ರಾಮ ಪಂಚಾಯತಿಗಳಲ್ಲಿ ಖಾಲಿಯಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನೇಮಕದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೬ (೫೮೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಖಾಲಿಯಾಗಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಸೆಕ್ರಟರಿ ಗ್ರೇಡ್ –೧ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಕೆಲವು ಗ್ರಾಮ ಪಂಚಾಯತಿಗಳು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕೊರತೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಎಷ್ಟು ಜನ ಶಾಸಕರು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನಿಯೋಜನೆ/ ಪ್ರಭಾರದ ಮೇಲೆ ಶಾಸಕರ ಆಪ್ತ ಸಹಾಯಕರನ್ನಾಗಿ ನೇಮಿಸಿಕೊಂಡಿದ್ದಾರೆ ಹಾಗೂ ಆಪ್ತ ಸಹಾಯಕರುಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಈ ಅಧಿಕಾರಿಗಳು ಗ್ರಾಮ ಪಂಚಾಯತಿಗಳಲ್ಲಿ ಕಾರ್ಯ ನಿರ್ವಹಿಸದೇ ಇರುವುದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಸರ್ಕಾರದ ವಿವಿಧ ಯೋಜನೆಗಳನ್ನು ಸೂಕ್ತ ರೀತಿಯಲ್ಲಿ ಜನ ಸಾಮಾನ್ಯರಿಗೆ ತಲುಪಿಸುವುದರಲ್ಲಿ ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಅಂತಹ ಅಧಿಕಾರಿಗಳನ್ನು ಮರಳಿ ಮಾತೃ ಇಲಾಖೆಗೆ/ ಗ್ರಾಮ ಪಂಚಾಯತಿಗಳಿಗೆ ಕಳುಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಸಾರಿಗೆ ಇಲಾಖೆಯಲ್ಲಿರುವ ಬಸ್ಸುಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ) :–**

೪೪೭ (೯೯೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರಿಗೆ ಇಲಾಖೆಯಲ್ಲಿನ ಒಟ್ಟು ಬಸ್ಸುಗಳ ಸಂಖ್ಯೆ ಎಷ್ಟು; (ವಲಯವಾರು ವಿವರ ನೀಡುವುದು)

(ಆ) ಹಾಲಿ ಎಷ್ಟು ಬಸ್ಸುಗಳನ್ನು ಖರೀದಿ ಮಾಡಲು ಯೋಜಿಸಲಾಗಿದೆ; ಇದಕ್ಕೆ ಬೇಕಾಗಿರುವ ಹಣಕಾಸಿನ ಮೊತ್ತ ಎಷ್ಟು ? (ವಿವರ ಒದಗಿಸುವುದು)

## ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ ಕೌಶಲ್ಯ ಅಭಿವೃದ್ಧಿಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮನಿರ್ದೇಶನ):–**

೪೪೮ (೪೮೯) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ ಕೌಶಲ್ಯ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ  ಕಾರ್ಯಕ್ರಮಗಳೇನು;

(ಆ) ಕೌಶಲ್ಯ ಅಭಿವೃದ್ಧಿಗಾಗಿ ಹೊಲಿಗೆ ಯಂತ್ರಗಳನ್ನು ನೀಡಲಾಗಿದೆಯೇ;

(ಇ) ನೀಡಿದ್ದಲ್ಲಿ, ಯಾವ ಯಾವ ಸಂಸ್ಥೆಗಳಿಗೆ ಅಥವಾ ವ್ಯಕ್ತಿಗಳಿಗೆ ನೀಡಲಾಗಿದೆ; (ವಿವರ ನೀಡುವುದು)

(ಈ) ಹಾಲಿ ಎಷ್ಟು ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ? (ವಿವರ ಒದಗಿಸುವುದು)

## ಬೆಂಗಳೂರಿನಲ್ಲಿ ಸ್ಥಗಿತಗೊಂಡ  ಸಣ್ಣ ಕೈಗಾರಿಕೆಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೪೮೯ (೫೦೪) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಎಷ್ಟು  ಸಣ್ಣ ಕೈಗಾರಿಕೆಗಳು ಇವೆ; ಇವುಗಳಲ್ಲಿ ಸ್ಥಗತಗೊಂಡಿರುವ ಕಾರ್ಖಾನೆಗಳು ಎಷ್ಟು ;

(ಆ) ಇವುಗಳಲ್ಲಿ ರೆಡ್, ಆರೆಂಜ್, ಗ್ರೀನ್ ಝೋನ್‌ಗಳೆಷ್ಟು ; (ವಿವರ ನೀಡುವುದು)

(ಇ) ಸ್ಥಗಿತಗೊಂಡಿರುವ ಕಾರ್ಖಾನೆಗಳ ಪುನಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ವಿಜಯಪುರ ಜಿಲ್ಲೆಯಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೪೫೦ (೪೯೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ;

(ಆ) ಹಾಲಿ ನಿರ್ಮಾಣ ಹಂತದಲ್ಲಿರುವ ಯೋಜನೆ ಎಷ್ಟು ಹಾಗೂ ನಿರ್ಮಾಣವಾಗಿರುವುದು ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ವಿಜಯಪುರ ಜಿಲ್ಲೆಯಲ್ಲಿ ಪಶುಸಂಗೋಪನೆ ಕೇಂದ್ರಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೪೫೧ (೪೯೧) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿನ ಪಶುಸಂಗೋಪನೆ ಕೇಂದ್ರಗಳು ಎಷ್ಟು ;

(ಆ) ಸದರಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸಿರುತ್ತಿರುವ ವೈದ್ಯರು ಹಾಗೂ ಸಿಬ್ಬಂದಿಗಳು ಎಷ್ಟು ; ಖಾಲಿ ಇರುವ ವೈದ್ಯರುಗಳನ್ನು ಯಾವಾಗ ತುಂಬಲಾಗುವುದು ?

## ಗ್ರಾಮ ಪಂಚಾಯ್ತಿಯಲ್ಲಿನ ಕಟ್ಟಡಗಳ ನಿರ್ಮಾಣದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೨ (೫೫೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ, ಹಾವೇರಿ ಜಿಲ್ಲೆಯಲ್ಲಿ ಬರುವ ಗ್ರಾಮ ಪಂಚಾಯತ್‌ಗಳಲ್ಲಿ ಎಷ್ಟು ಪಂಚಾಯಿತಿ ಕಛೇರಿಗಳು ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ;

(ಆ) ೨೦೧೮ ರಿಂದ ೨೦೨೦ ನೇ ಸಾಲಿನವರೆಗೆ ಗ್ರಾಮ ಪಂಚಾಯಿತ್‌ಗಳಲ್ಲಿ ಪಂಚಾಯಿತಿ ಕಛೇರಿಗಳ ಕಟ್ಟಡಗಳ ನಿರ್ಮಾಣ ಮಾಡಲು ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು ;

(ಇ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಣೆ ಮಾಡುತ್ತಿರುವ ಕಟ್ಟಡಗಳಲ್ಲಿ ಸ್ವಂತ ಕಟ್ಟಡಗಳ ನಿರ್ಮಾಣ ಮಾಡಲು ಕೈಗೊಂಡಿರುವ ಕ್ರಮಗಳೇನು ?

## ಗ್ರಾಮ ಪಂಚಾಯತ್‌ಗಳಲ್ಲಿ ಅಭಿವೃದ್ಧಿ ಅಧಿಕಾರಿಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೩ (೫೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ, ಹಾವೇರಿ ಜಿಲ್ಲೆಯಲ್ಲಿ ಬರುವ ಗ್ರಾಮ ಪಂಚಾಯತ್‌ಗಳಲ್ಲಿ ೫ ವರ್ಷಕ್ಕಿಂತ ಹೆಚ್ಚಿನ ಅವಧಿ ಒಂದೇ ಪಂಚಾಯ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಭಿವೃದ್ಧಿ ಅಧಿಕಾರಿಗಳ ಸಂಖ್ಯೆ ಎಷ್ಟು ;

(ಆ) ೫ ವರ್ಷಕ್ಕಿಂತ ಹೆಚ್ಚಿನ ಅವಧಿ ಒಂದೇ ಪಂಚಾಯ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಭಿವೃದ್ಧಿ ಅಧಿಕಾರಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮಗಳೇನು ?

## ಪಶು ಚಿಕಿತ್ಸಾಲಯಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೪ (೫೪೯) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ, ಹಾವೇರಿ ಜಿಲ್ಲೆಯಲ್ಲಿ ಬರುವ ಪಶು ಚಿಕಿತ್ಸಾಲಯಗಳೆಷ್ಟು ;

(ಆ) ಎಷ್ಟು ಪಶು ಚಿಕಿತ್ಸಾಲಯುಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ ;

(ಇ) ೨೦೧೮ ರಿಂದ ೨೦೨೦ ನೇ ಸಾಲಿನವರೆಗೆ ಪಶು ಚಿಕಿತ್ಸಾಲಯುಗಳ ಕಟ್ಟಡಗಳ ನಿರ್ಮಾಣ ಮಾಡಲು ಬಿಡುಗಡೆಯಾದ ಅನುದಾನವೆಷ್ಟು ;

(ಈ) ಈ ಮೇಲಿನ ಎಲ್ಲಾ ಪಶು ಚಿಕಿತ್ಸಾಲಯಗಳಿಗೆ ವೈದ್ಯಾಧಿಕಾರಿಗಳನ್ನು ನಿಯೋಜಿಸಲಾಗಿದೆಯೇ ;

(ಉ) ಈ ಮೇಲಿನ ಜಿಲ್ಲೆಯಲ್ಲಿ ಖಾಲಿ ಇರುವ ಪಶು ವೈದ್ಯಾಧಿಕಾರಿಗಳ ಹುದ್ದೆ ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಕಾಲುಬಾಯಿ ಜ್ವರಕ್ಕೆ ನೀಡಿರುವ ಲಸಿಕೆ ಕಳಪೆ ಗುಣಮಟ್ಟದ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೫ (೯೩) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾಲುಬಾಯಿ ಜ್ವರಕ್ಕೆ ನೀಡಿರುವ ಲಸಿಕೆ ಕಳಪೆ ಮಟ್ಟದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಲಸಿಕೆಗೆ ಸರ್ಕಾರ ಮೀಸಲಿಟ್ಟಿರುವ ಅನುದಾನ ಎಷ್ಟು ; ಪ್ರತಿ ಲಸಿಕೆ ಉತ್ಪಾದನಾ ವೆಚ್ಚ ಎಷ್ಟು ;

(ಇ) ಕಾಲುಬಾಯಿ ಜ್ವರಕ್ಕೆ ಬಲಿಯಾಗಿರುವ ಜಾನುವಾರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕಾಲುಬಾಯಿ ಜ್ವರಕ್ಕೆ ಬಲಿಯಾದ ಜಾನುವಾರುಗಳಿಗೆ ಇದುವರೆಗೂ ನೀಡಿರುವ ಪರಿಹಾರದ ಮೊತ್ತ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ೨೦೧೯–೨೦೨೦ನೇ ಸಾಲಿನಲ್ಲಿ ಅಂಗನವಾಡಿ ಕೇಂದ್ರಗಳ ದುರಸ್ಥಿಗೆ ಸರ್ಕಾರ ನೀಡಿರುವ ಅನುದಾನ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೬ (೯೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦೨೦ನೇ ಸಾಲಿನಲ್ಲಿ ಅಂಗನವಾಡಿ ಕೇಂದ್ರಗಳ ದುರಸ್ಥಿಗೆ ಸರ್ಕಾರ ನೀಡಿರುವ ಅನುದಾನ ಎಷ್ಟು ; ಇವುಗಳಲ್ಲಿ ದುರಸ್ಥಿ ಮಾಡಬೇಕಾದ ಕೇಂದ್ರಗಳ ಸಂಖ್ಯೆ ಎಷ್ಟು ; ವ್ಯವಸ್ಥಿತವಾಗಿರುವ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿ ಒಟ್ಟು ಇರುವ ಅಂಗನವಾಡಿ ಕೇಂದ್ರಗಳೇಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರತಿ ತಿಂಗಳು ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲಾದ ಆಹಾರ ಸಾಮಾಗ್ರಿಗಳು ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ವೇತನ ತಾರತಮ್ಯ ನಿವಾರಿಸುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೭ (೫೫೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನೌಕರುಗಳಿಗೆ ವೇತನ ತಾರತಮ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಆ) ಹಾಗಿದ್ದಲ್ಲಿ, ವೇತನ ತಾರತಮ್ಯ ನಿವಾರಿಸಲು ಸರ್ಕಾರದಿಂದ ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ; ಯಾವ ಕಾಲಮಿತಿಯೊಳಗೆ ಈ ತಾರತಮ್ಯವನ್ನು ಬಗೆಹರಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಸಾರಿಗೆ ಇಲಾಖೆಯ ಗುತ್ತಿಗೆ ನೌಕರರ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೮ (೫೩೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರಿಗೆ ಇಲಾಖೆಯಲ್ಲಿ ಎಷ್ಟು ನೌಕರರು ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿದ್ದಾರೆ ; ಆಯಾ ವಲಯವಾರು ಮಾಹಿತಿಯನ್ನು ಒದಗಿಸುವುದು ; ಹಾಗೂ ಅವರಿಗೆ ವೇತನವನ್ನು ಯಾವ ಆಧಾರದಲ್ಲಿ ನೀಡಲಾಗುತ್ತಿದೆ ;

(ಆ) ಸಾರಿಗೆ ಇಲಾಖೆಯಲ್ಲಿ ಒಟ್ಟು ಖಾಲಿಯಿರುವ ಖಾಯಂ ಹುದ್ದೆಗಳು ಎಷ್ಟು ; ಅವುಗಳಲ್ಲಿ ಬ್ಯಾಕ್ ಲಾಗ್ ಹುದ್ದೆಗಳೆಷ್ಟು ; (ಆಯಾ ವಲಯವಾರು ಮಾಹಿತಿ ಒದಗಿಸುವುದು)

(ಇ) ಖಾಲಿ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗಿದೆಯೇ ; ಹುದ್ದೆಗಳನ್ನು ಎಷ್ಟು ಕಾಲಾಮಿತಿಯೊಳಗೆ ತುಂಬಲು ಕ್ರಮಕೈಗೊಳ್ಳಲಾಗಿದೆ ? (ಮಾಹಿತಿ ಒದಗಿಸುವುದು)

## ಅಂಗವಿಕಲ ಸರ್ಕಾರಿ ಅಧಿಕಾರಿಗಳ ಮುಂಬಡ್ತಿ ಮೀಸಲಾತಿ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೯ (೫೩೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ ೧೫೬೭/೨೦೧೭ ರಲ್ಲಿ ಅಂಗವಿಕಲ ಸರ್ಕಾರಿ ಅಧಿಕಾರಿ/ನೌಕರರಿಗೆ

ಮುಂಬಡ್ತಿಯಲ್ಲಿ ಮೀಸಲಾತಿ ಕಲ್ಪಿಸಲು ಆದೇಶ ನೀಡಿದ್ದು ಅದರಂತೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ; (ವಿವರ ನೀಡುವುದು)

(ಆ) ಅಂಗವಿಕಲ ವ್ಯಕ್ತಿಗಳ ಹಕ್ಕು ಅಧಿನಿಯಮ, ೨೦೧೬ರ ಸೆಕ್ಷನ್ ೩೪ ರಡಿ ಅಂಗವಿಕಲ ಸರ್ಕಾರಿ ಅಧಿಕಾರಿ/ನೌಕರರಿಗೆ ಮುಂಬಡ್ತಿಯಲ್ಲಿ ಮೀಸಲಾತಿ ಕಲ್ಪಿಸುವ ಅವಕಾಶ ನೀಡಿದ್ದು, ಸರ್ಕಾರ ಕೈಗೊಂಡ ಕ್ರಮದ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಇ) ರಾಜ್ಯ ಸರ್ಕಾರದ ಅಡಿಯಲ್ಲಿ ಬರುವ ಇಲಾಖೆಗಳಲ್ಲಿ, (ನಿಗಮ/ಮಂಡಳಿ/ಪ್ರಾಧಿಕಾರಗಳು ಸೇರಿದಂತೆ) ಮಂಜೂರಾದ ಹುದ್ದೆಗಳ ಸಂಖ್ಯೆ, ಭರ್ತಿಯಾದ ಹುದ್ದೆಗಳ ಸಂಖ್ಯೆ, ಖಾಲಿ ಇರುವ ಹುದ್ದೆಗಳ ಸಂಖ್ಯೆ (ಗ್ರೂಪ್–ಎ, ಗ್ರೂಪ್–ಬಿ, ಗ್ರೂಪ್–ಸಿ, ಗ್ರೂಪ್–ಡಿ) ಎಷ್ಟು; ಮತ್ತು ಅಂಗವಿಕಲ ನೌಕರರ ಒಟ್ಟು ಸಂಖ್ಯೆ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಮಾರಣಾಂತಿಕ ಕಾಯಿಲೆಗೆ ತುತ್ತಾದ ಪಶುಗಳ ಬಗ್ಗೆ

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೦ (೫೩೪) ಮಾನ್ಯ ಪಂಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೯ ರಿಂದ ೨೦೨೦ ಡಿಸೆಂಬರ್ ವರೆಗೆ ಮಾರಣಾಂತಿಕ ಕಾಯಿಲೆಗಳಿಗೆ ತುತ್ತಾದ ಪಶುಗಳ ಬಗ್ಗೆ ಮಾಹಿತಿ ಇದ್ದಲ್ಲಿ, ಯಾವ ಯಾವ ಕಾಯಿಲೆಗೆ ಎಷ್ಟೆಷ್ಟು ಪಶುಗಳು ಬಲಿಯಾಗಿವೆ ; (ವಲಯವಾರು ಮಾಹಿತಿ ನೀಡುವುದು)

(ಆ) ಪಶುಗಳ ಮಾರಣಾಂತಿಕ ಕಾಯಿಲೆಗೆ ಬಲಿಯಾಗುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು, ಯೋಜನೆಗಳು ಯಾವುವು ? (ವಿವರವನ್ನು ಒದಗಿಸುವುದು)

## ಹೊಸ ಗ್ರಾಮ ಪಂಚಾಯಿತಿಗಳ ಬಗ್ಗೆ

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೧ (೫೩೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳನ್ನು ಹೊಸದಾಗಿ ಸೃಜಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಹೊಸದಾಗಿ ಗ್ರಾಮ ಪಂಚಾಯಿತಿಗಳನ್ನು ಮಾಡಲು ಇರುವ ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಗ್ರಾಮ ಪಂಚಾಯಿತಿಗಳಿಗೆ ಸರ್ಕಾರದಿಂದ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ? (ವಿವರ ನೀಡುವುದು)

## ನಿರ್ಭಯಾ ನಿಧಿಯ ವೆಚ್ಚದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೨ (೪೯೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ನಿರ್ಭಯಾ ನಿಧಿಯ ಅನ್ವಯ ಬಂದಿರುವ ಅನುದಾನವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ನಿರ್ಭಯಾ ನಿಧಿಯನ್ನು ಯಾವ ಯಾವ ವಿಷಯಗಳಿಗೆ ಸಂಬಂಧಿಸಿದಂತೆ ವೆಚ್ಚ ಮಾಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ನಿರ್ಭಯಾ ನಿಧಿಯ ಅನುದಾನದಲ್ಲಿ ರಾಜ್ಯ ಸರ್ಕಾರದ ಪಾಲೆಷ್ಟು ; ಮಹಿಳೆ ಮತ್ತು ಹೆಣ್ಣು ಮಕ್ಕಳಲ್ಲಿ ಗೃಹ ಹಿಂಸೆ, ಲೈಂಗಿಕ ದೌರ್ಜನ್ಯದ ವಿರುದ್ಧ ಜಾಗೃತಿ ಮೂಡಿಸಲು ಮಾಡಲಾಗಿರುವ ವೆಚ್ಚ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಮಕ್ಕಳ ಸಮಗ್ರ ರಕ್ಷಣಾ ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೩ (೫೦೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಮಕ್ಕಳ ಸಮಗ್ರ ರಕ್ಷಣಾ ಯೋಜನೆಯ ಅನ್ವಯ ಯಾವ ಯಾವ ಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಇದಕ್ಕೆ ತಗುಲಿದ ವೆಚ್ಚ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯಾದ್ಯಂತ ಬಾಲನ್ಯಾಯ ಕಾಯ್ದೆ, ೨೦೧೫ರ ಅನ್ವಯ ಇದುವರೆಗೆ ದಾಖಲು ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಸದರಿ ಪ್ರಕರಣಗಳನ್ನು ಯಾವ ರೀತಿಯಾಗಿ ವಿಲೇವಾರಿ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಅನುಪಾಲನಾ ಬಾಲಗೃಹಗಳೆಷ್ಟು; ಅದರಲ್ಲಿ ಎಷ್ಟು ಮಕ್ಕಳ ಜವಾಬ್ದಾರಿಯನ್ನು ವಹಿಸಿಕೊಳ್ಳಲಾಗಿದೆ ; ಸದರಿ ಗೃಹಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ವಿಶೇಷಚೇತನರ ಸಬಲೀಕರಣ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೪ (೫೦೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಿಶೇಷಚೇತನರ ಸಂಖ್ಯೆ ಎಷ್ಟು ; ಅವರು ಬಳಲುತ್ತಿರುವ ದೈಹಿಕ ಸಮಸ್ಯೆಗಳು ಯಾವುವು: (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವಿಶೇಷಚೇತನರ ಸಬಲೀಕರಣಕ್ಕೆ ಸರ್ಕಾರದ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ;

(ಇ) ಕಳೆದ ೫ ವರ್ಷಗಳಲ್ಲಿ ವಿಶೇಷಚೇತನರ ಸಬಲೀಕರಣಕ್ಕೆ ಕೇಂದ್ರ ಸರ್ಕಾರದಿಂದ ಬಂದ ಅನುದಾನವೆಷ್ಟು; ಅದನ್ನು ಯಾವ ಯಾವ ರೀತಿಯಲ್ಲಿ ವೆಚ್ಚ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯ ಸರ್ಕಾರ ಕಳೆದ ೫ ವರ್ಷಗಳಲ್ಲಿ ವಿಶೇಷಚೇತನರ ಸಬಲೀಕರಣಕ್ಕೆ ನೀಡಿದ ಅನುದಾನವೆಷ್ಟು ?

## ಖಾಸಗಿ ಬಸ್ಸುಗಳಲ್ಲಿ ಸರಕು ಸಾಗಾಣಿಕೆ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೫ (೪೯೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಖಾಸಗಿ ಸಂಸ್ಥೆಗಳ ಬಸ್ಸುಗಳಿಗೆ ಸಂಚರಿಸಲು ಅನುಮತಿ ನೀಡುವಾಗ ಯಾವ ರೀತಿಯ ನಿರ್ಬಂಧಗಳನ್ನು ವಿಧಿಸಲಾಗಿದೆ ;

(ಆ) ಖಾಸಗಿ ಬಸ್ಸುಗಳು ಬಸ್ಸಿನ ಮೇಲೆ ದೊಡ್ಡ ಮಟ್ಟದಲ್ಲಿ ವಾಣಿಜ್ಯ ಸರಕುಗಳನ್ನು ಸಾಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಪ್ರಮಾಣಿಕರ ಜೀವ ಹಾನಿಯಾದರೆ ಜವಾಬ್ದಾರಿ ಯಾರು; ಈ ಕುರಿತು ಸರ್ಕಾರದ ನಿಲುವೇನು ;

(ಇ) ಖಾಸಗಿ ಬಸ್ಸುಗಳಲ್ಲಿ ಸರಕುಗಳನ್ನು ಸಾಗಿಸಲು ಅನುಮತಿ ನೀಡಲಾಗಿದೆಯೇ; ಇಲ್ಲವಾದ್ದಲ್ಲಿ, ಕಳೆದ ೨ ವರ್ಷಗಳಲ್ಲಿ ಈ ಕುರಿತು ಎಷ್ಟು ಪ್ರಕರಣಗಳು ದಾಖಲಾಗಿವೆ ; ಎಷ್ಟು ದಂಡ ವಸೂಲಿ ಮಾಡಲಾಗಿದೆ ; ಎಷ್ಟು ಖಾಸಗಿ ಬಸ್ಸುಗಳ ಲೈಸೆನ್ಸ್ ರದ್ದುಗೊಳಿಸಲಾಗಿದೆ ?

## ಬಹು ಗ್ರಾಮ ಕುಡಿಯುವ ನೀರಿನ ಯೋಜನೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೬ (೫೦೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ಮಾಡಿರುವ ವೆಚ್ಚ ಎಷ್ಟು; ಎಷ್ಟು ಗ್ರಾಮಗಳಿಗೆ ಕುಡಿಯುವ ನೀರಿನ ಸೌಲಭ್ಯ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಅನ್ವಯ ಎಷ್ಟು ಕೆರೆಗಳನ್ನು ನಿರ್ಮಿಸಲಾಗಿದೆ; ಅದಕ್ಕೆ ತಗುಲಿದ ವೆಚ್ಚವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಅನ್ವಯ ನಿರ್ಮಿಸಲಾದ ಕೆರೆಗಳಲ್ಲಿ ಎಷ್ಟು ಕೆರೆಗಳು ನೀರಿನ ಸಂಗ್ರಹವನ್ನು ಹೊಂದಿವೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕುಗ್ರಾಮಗಳಿಗೆ ಬಸ್ ಸಂಚಾರದ ವ್ಯವಸ್ಥೆ ಕಲ್ಪಿಸುವ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ) :–**

೪೬೭ (೫೬೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಿಂದ ಸಾರ್ವಜನಿಕ ಸಾರಿಗೆ ಬಸ್ಸುಗಳು ಎಷ್ಟು ಮಾರ್ಗಗಳಲ್ಲಿ ಸಂಚರಿಸುತ್ತಿವೆ ; (ವಿವರ ನೀಡುವುದು)

(ಆ) ರಾಜ್ಯದ ಹಲವು ಕುಗ್ರಾಮಗಳು ಈಗಲೂ ಸಹಾ ಬಸ್ಸು ಸಂಚಾರ ವ್ಯವಸ್ಥೆಯಿಂದ ದೂರ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ; (ವಿವರ ನೀಡುವುದು)

(ಇ) ಸಾರ್ವಜನಿಕ ಸಾರಿಗೆ ಬಸ್ಸುಗಳ ಸಂಚಾರ ವ್ಯವಸ್ಥೆ ಕಲ್ಪಿಸುವಂತೆ ಎಷ್ಟು ಗ್ರಾಮಗಳಿಂದ ಅಹವಾಲುಗಳು/ಅರ್ಜಿಗಳು ಬಂದಿರುತ್ತದೆ ; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮವಾರು ವಿವರ ನೀಡುವುದು)

(ಈ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಿಂದ ನೂತನವಾಗಿ ಎಷ್ಟು ಗ್ರಾಮಗಳಿಗೆ ಬಸ್ಸು ಸಂಚಾರ ವ್ಯವಸ್ಥೆಯನ್ನು ಪ್ರಾರಂಭಿಸಲು ಸರ್ಕಾರ ಚಿಂತಿಸಿದೆ ? (ವಿವರ ನೀಡುವುದು)

## ಅಂಗನವಾಡಿ ಮತ್ತು ಕಾರ್ಯಕರ್ತೆಯರ ಮಾಹಿತಿ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೪೬೮ (೫೮೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ; ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡುತ್ತಿರುವ ಗೌರವಧನ ಎಷ್ಟು; ಅವರ ದಿನದ ಕಾರ್ಯಾವಧಿ ಎಷ್ಟು ; (ವಿವರ ನೀಡುವುದು)

(ಆ) ಅಂಗನವಾಡಿ ಕಾರ್ಯಕರ್ತೆಯರ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ಬಾಲಮಂದಿರಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೪೬೯ (೫೮೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಬಾಲಕರ ಹಾಗೂ ಬಾಲಕಿಯರ ಬಾಲಮಂದಿರಗಳಿವೆ ; ಅವುಗಳಲ್ಲಿ ಎಷ್ಟು ವಿದ್ಯಾರ್ಥಿಗಳು ಆಶ್ರಯ ಪಡೆದಿರುತ್ತಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಒಟ್ಟು ಮಹಿಳಾ ನಿಲಯಗಳು ಎಷ್ಟು ; ಮತ್ತು ಅದರಲ್ಲಿ ಆಶ್ರಯ ಪಡೆದ ಮಹಿಳೆಯರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಬಾಲಮಂದಿರ ಹಾಗೂ ಮಹಿಳಾ ನಿಲಯಗಳ ನಿರ್ವಹಣೆಗಾಗಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಈ) ಇಲಾಖೆಯಲ್ಲಿ ಮಂಜೂರಾದ ಒಟ್ಟು ಹುದ್ದೆಗಳು ಎಷ್ಟು ; ಅವುಗಳಲ್ಲಿ ಎಷ್ಟು ಹುದ್ದೆಗಳು ನಿಧನ/ನಿವೃತ್ತಿ ಮತ್ತು ರಾಜೀನಾಮೆಯಿಂದ ತೆರವಾಗಿವೆ ? (ಹುದ್ದೆವಾರು ಮಾಹಿತಿ ನೀಡುವುದು)

## ಭಾಗ್ಯಲಕ್ಷ್ಮಿ ಯೋಜನೆ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೪೭೦ (೫೮೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ಭಾಗ್ಯಲಕ್ಷ್ಮಿ ಯೋಜನೆ ಅಡಿಯಲ್ಲಿ ಆಯ್ಕೆಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಫಲಾನುಭವಿಗಳ ಹೆಸರಿನ ಜೊತೆಗೆ ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಎಷ್ಟು ಜನರಿಗೆ ಭಾಗ್ಯಲಕ್ಷ್ಮಿ ಬಾಂಡ್ ವಿತರಿಸಲಾಗಿದೆ ; ಬಾಂಡ್ ವಿತರಿಸಲು ಬಾಕಿ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ವಿಳಂಬಕ್ಕೆ ಕಾರಣ ಏನು ಹಾಗೂ ಯಾವ ಕಾಲಮಿತಿಯೊಳಗೆ ಬಾಂಡ್ ವಿತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ;

(ಈ) ಭಾಗ್ಯಲಕ್ಷ್ಮಿ ಯೋಜನೆ ಪಡೆಯಲು ಇರುವ ಮಾನದಂಡಗಳೇನು? (ವಿವರ ನೀಡುವುದು)

## ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

**ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ) :–**

೪೭೧ (೫೮೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ರಾಜ್ಯಾದ್ಯಂತ ಸ್ಥಾಪಿಸಲಾಗಿರುವ ಒಟ್ಟು ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಕುಡಿಯುವ ನೀರಿನ ಘಟಕಗಳನ್ನು ನಿರ್ವಹಿಸಲು ಯಾವ ಖಾಸಗಿ ಕಂಪನಿಯುವರಿಗೆ ವಹಿಸಲಾಗಿದೆ ಮತ್ತು ಈ ಯೋಜನೆಯಲ್ಲಿ ಬಿಡುಗಡೆಯಾದ ಒಟ್ಟು ಅನುದಾನ ಎಷ್ಟು ; (ಖರ್ಚಾದ ಮತ್ತು ಬಾಕಿ ಉಳಿದಿರುವ ಅನುದಾನದ ವಿವರ ನೀಡುವುದು)

(ಇ) ರಾಜ್ಯಾದ್ಯಂತ ಇಲ್ಲಿಯವರೆಗೆ ಸ್ಥಗಿತಗೊಂಡಿರುವ ಒಟ್ಟು ಶುದ್ಧ ನೀರಿನ ಘಟಕಗಳ ಸಂಖ್ಯೆ ಎಷ್ಟು ; ಇವುಗಳ ದುರಸ್ಥಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸುವ ಯೋಜನೆಯಲ್ಲಿ ಅವ್ಯವಹಾರಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಖಾಲಿ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೪೭೨ (೪೯೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯತ್‌ಗಳಲ್ಲಿ ಮಂಜೂರಾದ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಆ) ಇದರಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; ಯಾವಾಗ ಭರ್ತಿ ಮಾಡಲಾಗುವುದು ;

(ಇ) ಪಿ.ಡಿ.ಓ ಹುದ್ದೆಗಳನ್ನು ಉನ್ನತೀಕರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಇದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಬಸ್ ನಿಲ್ದಾಣಗಳಲ್ಲಿ ಮಹಿಳಾ ವಿಶ್ರಾಂತಿ ಗೃಹ ನಿರ್ಮಾಣದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೪೭೩ (೪೯೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಬಸ್ ನಿಲ್ದಾಣಗಳಿವೆ ;

(ಆ) ಈ ಬಸ್ ನಿಲ್ದಾಣಗಳಲ್ಲಿ ಮಹಿಳೆಯರ ವಿಶ್ರಾಂತಿ ಗೃಹಗಳನ್ನು ನಿರ್ಮಿಸಲಾಗಿದೆಯೇ ;

(ಇ) ಇಲ್ಲವಾದಲ್ಲಿ, ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಬಸ್ ನಿಲ್ದಾಣಗಳಲ್ಲಿನ ಶೌಚಾಲಯಗಳ ಸಮರ್ಪಕ ನಿರ್ವಹಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ವಾಹನಗಳಲ್ಲಿ ಪ್ರಕರವಾದ ಹೆಡ್‌ಲೈಟ್‌ಗಳನ್ನು ಬಳಸುತ್ತಿರುವುದರಿಂದ ಆಗುತ್ತಿರುವ ತೊಂದರೆಗಳ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೪ (೪೮೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾಹನಗಳಲ್ಲಿ ಯಾವ ರೀತಿಯ ದೀಪಗಳನ್ನು ಅಳವಡಿಸಬೇಕು ಎಂಬುದಕ್ಕೆ ಸರ್ಕಾರಿ ಆದೇಶವೇನಾದರೂ ಇದೆಯೇ ; ಇದ್ದಲ್ಲಿ, ಅದರ ಆದೇಶದ ಪ್ರತಿಯನ್ನು ಒದಗಿಸುವುದು ;

(ಆ) ವಾಹನಗಳಲ್ಲಿ ಪ್ರಕರವಾದ ಎಲ್.ಇ.ಡಿ ದೀಪಗಳನ್ನು ಅಳವಡಿಸಲು ಅವಕಾಶವಿದೆಯೇ ; ಇದ್ದಲ್ಲಿ, ಅದರ ಮಾಹಿತಿಯನ್ನು ನೀಡುವುದು;

(ಇ) ಪ್ರಕರವಾದ ಮತ್ತು ಕಣ್ಣು ಚುಚ್ಚುವ ಎಲ್.ಇ.ಡಿ ದೀಪಗಳನ್ನು ಅಳವಡಿಸಿಕೊಂಡಿರುವ ವಾಹನಗಳಿಂದ ಬೇರೆ ವಾಹನ ಸವಾರರಿಗೆ ತೊಂದರೆಯಾಗುತ್ತಿರುವುದು ಮತ್ತು ಅಪಘಾತಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)

## ವಿಶೇಷಚೇತನರಿಗೆ ನೀಡುವ ಮಾಶಾಸನವು ನಿಂತುಹೋಗಿರುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೫ (೪೮೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವಿಶೇಷಚೇತನರ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಹತ್ತು ತಿಂಗಳಿನಿಂದ ವಿಶೇಷಚೇತನರಿಗೆ ನೀಡುವ ಮಾಶಾಸನವು ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ವಿಶೇಷಚೇತನರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಡಿಯಲ್ಲಿ ಬರುವುದರಿಂದ ಇವರುಗಳಿಗೆ ಒಂದು ಸರ್ವೇ ಕಾರ್ಯವನ್ನು ಮಾಡಿ, ಹೋಬಳಿ ಮಟ್ಟದಲ್ಲಿ ಅದಾಲತ್‌ಗಳನ್ನು ನಡೆಸಿ ಅವರುಗಳ ಸಮಸ್ಯೆಗಳನ್ನು ಸರಿಪಡಿಸಲು ಸರ್ಕಾರದ ನೀಲುವೇನು ? (ವಿವರ ನೀಡುವುದು)

## ಕರೋನಾದಿಂದ ಖಾಸಗಿ ಬಸ್ ಮಾಲೀಕರ ಸಂಕಷ್ಟಗಳನ್ನು ಪರಿಹರಿಸುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೬ (೪೮೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರೋನಾದಿಂದಾಗಿ ಖಾಸಗಿ ಬಸ್ ಮಾಲೀಕರು ತಮ್ಮ ಬಸ್‌ಗಳನ್ನು ಸರೆಂಡರ್ ಮಾಡಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು) ಕೊಡಗು ಜಿಲ್ಲೆಯಲ್ಲಿನ ಬಸ್‌ಗಳ ವಿವರಗಳನ್ನು ನೀಡುವುದು ;

(ಆ) ಖಾಸಗಿ ಬಸ್ ಮಾಲೀಕರುಗಳಿಗೆ ಸರ್ಕಾರವು ನೀಡಿರುವ ಸಹಾಯ ಹಸ್ತದ ವಿವರಗಳನ್ನು ನೀಡುವುದು ;

(ಇ) ಈ ಖಾಸಗಿ ಬಸ್/ಟ್ಯಾಕ್ಸಿಗಳಿಗೆ ಕರೋನಾ ಸಂಕಷ್ಟವು ನಿಲ್ಲುವವರೆಗೆ ರಸ್ತೆ ತೆರಿಗೆಯಲ್ಲಿ ೫೦% ಕಡಿತಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ತುಂಬುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೭ (೪೮೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಇಲಾಖೆಯಲ್ಲಿ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಹಾಗೂ ಹಾಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ, ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಕಳೆದ ಸುಮಾರು ವರ್ಷಗಳಿಂದ ಜಿಲ್ಲೆಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಹುದ್ದೆಗಳು ಖಾಲಿ ಇರಲು ಕಾರಣಗಳೇನು ; (ವಿವರ ನೀಡುವುದು)

(ಇ) ಇಲಾಖೆಯಲ್ಲಿ ಸುಮಾರು ೮೦% ಹುದ್ದೆಗಳು ಖಾಲಿ ಇದ್ದರೂ ಇಲ್ಲಿಗೆ ಸಿಬ್ಬಂದಿಗಳನ್ನು ವರ್ಗಾಯಿಸಿಲ್ಲವೇಕೆ ; (ಮಾಹಿತಿ ನೀಡುವುದು)

(ಈ) ಈ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ತುಂಬಲಾಗುವುದು? (ಮಾಹಿತಿ ನೀಡುವುದು)

## ಕುಡಿಯುವ ನೀರಿನ ಸಮಸ್ಯೆ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೮ (೫೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ, ಬೀದರ್, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಿಗೆ ಟ್ಯಾಂಕರ್ ಮತ್ತು ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ಶಾಶ್ವತವಾಗಿ ಕುಡಿಯುವ ನೀರು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶುದ್ಧ ಕುಡಿಯುವ ನೀರಿನ ಘಟಕ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೯ (೫೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ರಾಜ್ಯದಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

ಆ) ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಆರು ತಿಂಗಳು ಮೇಲ್ಪಟ್ಟು ದುರಸ್ಥಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳೆಷ್ಟು; ಮತ್ತು ಅವುಗಳನ್ನು ದುರಸ್ಥಿಗೊಳಿಸದಿರಲು ಕಾರಣಗಳೇನು ? (ತಾಲ್ಲೂಕುವಾರು ವಿವರ ನೀಡುವುದು)

## ಜಲಾಮೃತ ಯೋಜನೆ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೦ (೫೪೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೩ ವರ್ಷಗಳಿಂದ ಕಲಬುರಗಿ, ಬೀದರ್, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಜಲಾಮೃತ ಯೋಜನೆಯಡಿ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; ಮತ್ತು ಖರ್ಚಾಗದೇ ಉಳಿದಿರುವ ಅನುದಾನ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

ಆ) ಕಳೆದ ೦೩ ವರ್ಷಗಳಿಂದ ಜಲಾಮೃತ ಯೋಜನೆಯಡಿ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಮತ್ತು ಎಷ್ಟು ಕಾಮಗಾರಿಗಳು ಪ್ರಗತಿಯಲ್ಲಿವೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸಣ್ಣ ಕೈಗಾರಿಕೆಗಳ ಘಟಕಗಳು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೪೮೧ (೫೭೬) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಒಟ್ಟು ಸಣ್ಣ ಕೈಗಾರಿಕೆಗಳ ಘಟಕಗಳ ಸಂಖ್ಯೆ ಎಷ್ಟು; ಘಟಕಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮತ್ತು ವರ್ಗಾವಾರು ವಿವರಗಳನ್ನು ನೀಡುವುದು)

(ಆ) ದೇಶಾದ್ಯಂತ ವ್ಯಾಪಕವಾಗಿ ಹರಡಿದ್ದ ಕೋವಿಡ್–೧೯ ಸೋಂಕು ಹಿನ್ನೆಲೆಯಲ್ಲಿ ಈ ಸೋಂಕಿನಿಂದ ಬಾಧಿತವಾದ ಸಣ್ಣ ಕೈಗಾರಿಕೆಗಳ ಘಟಕಗಳೆಷ್ಟು ಮತ್ತು ಇದರಿಂದ ಉದ್ಯೋಗ ಕಳೆದುಕೊಂಡ ಉದ್ಯೋಗಿಗಳೆಷ್ಟು; ಈ ಬಗ್ಗೆ ರಾಜ್ಯ ಸರ್ಕಾರ ಇತ್ತೀಚೆಗೆ ಗಣತಿಯನ್ನು ನಡೆಸಿದೆಯೇ; ನಡೆಸಿದ್ದಲ್ಲಿ, (ಜಿಲ್ಲಾವಾರು ಮತ್ತು ವರ್ಗಾವಾರು ವಿವರವನ್ನು ಒದಗಿಸುವುದು)

(ಇ) ಕೇಂದ್ರ ಸರ್ಕಾರದ 'ಆತ್ಮ ನಿರ್ಭರ ಭಾರತ' ಅಭಿಯಾನದಡಿಯಲ್ಲಿ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದಿಂದ ಬಾಧಿತ ಸಣ್ಣ ಕೈಗಾರಿಕೆಗಳ ಘಟಕಗಳನ್ನು ಪುನಶ್ಚೇತನಗೊಳಿಸಲು ಪಡೆದಿರುವ ಅನುದಾನವೆಷ್ಟು? (ಜಿಲ್ಲಾವಾರು ಮತ್ತು ವರ್ಗಾವಾರು ವಿವರಗಳನ್ನು ನೀಡುವುದು)

## “ಆತ್ಮ ನಿರ್ಭರ ಭಾರತ ಅಭಿಯಾನ” ಅಡಿಯಲ್ಲಿ ಅತಿ ಸಣ್ಣ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಪುನಶ್ಚೇತನ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೪೮೨ (೫೦೫) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಅತಿ ಸಣ್ಣ ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಘಟಕಗಳೆಷ್ಟು; ಈ ವಲಯದಲ್ಲಿ ಸೃಜನೆಯಾಗಿರುವ ಹುದ್ದೆಗಳೆಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಕೋವಿಡ್ ಸೋಂಕು–೧೯ ಹರಡುವಿಕೆ ಹಿನ್ನೆಲೆಯಲ್ಲಿ ಲಾಕ್‌ಡೌನ್ ವಿಧಿಸಿದ್ದರ ಪ್ರಯುಕ್ತ ರಾಜ್ಯದಲ್ಲಿ ಬಾಧಿತವಾದ ಒಟ್ಟು ಅತಿ ಸಣ್ಣ ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಘಟಕಗಳ ಸಂಖ್ಯೆ ಎಷ್ಟು; ಈ ಬಗ್ಗೆ ರಾಜ್ಯ ಸರ್ಕಾರ ಅಧಿಕೃತವಾಗಿ ಸಮೀಕ್ಷೆ ನಡೆಸಿದೆಯೇ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಸದರಿ ಕೇಂದ್ರ ಸರ್ಕಾರ ಘೋಷಿಸಿರುವ “ಆತ್ಮ ನಿರ್ಭರ ಭಾರತ ಅಭಿಯಾನ”ದ ಅಡಿಯಲ್ಲಿ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಮತ್ತು ಉದ್ಯಮಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ ವ್ಯಾಪಾರ ವಹಿವಾಟು ಸಾಲ, ಸರ್ಕಾರದಿಂದ ಷೇರು ತುಂಬುವುದು ಮತ್ತು ಸಾಲ ಖಾತ್ರಿ ಆರ್ಥಿಕ ನೆರವು ಅಡಿಯಲ್ಲಿ ರಾಜ್ಯಕ್ಕೆ ದೊರೆತಿರುವ ಆರ್ಥಿಕ ನೆರವು ಎಷ್ಟು; ಆರ್ಥಿಕ ನೆರವನ್ನು ಯಾವ ಯಾವ ಇಲಾಖೆಯ ಮುಖೇನ ಒದಗಿಸಲಾಗಿದೆ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

## " ರಾಷ್ಟ್ರೀಯ ಬಾಲವಾಡಿ ಯೋಜನೆ " (National Creche Scheme)

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೪೮೩ (೫೭೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮನೆ ಕೆಲಸಗಾರರ ಸಂಖ್ಯೆ ಅದರಲ್ಲೂ ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿ ಗಣನೀಯವಾಗಿ ಹೆಚ್ಚಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ವಿವರ ನೀಡುವುದು)

(ಆ) ಈ ಮನೆ ಕೆಲಸಗಾರರ ಮಕ್ಕಳ ಆರೈಕೆಗಾಗಿ ರಾಜ್ಯ ಸರ್ಕಾರ ಸಹಾಯ ಧನವನ್ನು ನೀಡುತ್ತಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ "ರಾಷ್ಟ್ರೀಯ ಬಾಲವಾಡಿ ಯೋಜನೆ" (National Creche Scheme) ಯನ್ನು ರಾಜ್ಯದಲ್ಲಿ ಜಾರಿಗೆ ತಂದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಯೋಜನೆ ಅಡಿಯಲ್ಲಿ ನೀಡಬೇಕಾಗಿರುವ ಸಹಾಯ ಧನ ನೀಡುವಲ್ಲಿ ವಿಳಂಬ ಆಗಿರುವುದರಿಂದ ಮತ್ತು ಅಸ್ತಿತ್ವದಲ್ಲಿ ಇಲ್ಲದೆ ರಾಜ್ಯದಲ್ಲಿ ಹಲವಾರು ಬಾಲವಾಡಿ ಶಾಲೆಗಳು ಮುಚ್ಚಿ ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದೇ? (ಸಂಪೂರ್ಣ ಮಾಹಿತಿ ನೀಡುವುದು)

## ಅಂಗನವಾಡಿ ಕೇಂದ್ರಗಳಿಗೆ ಕಟ್ಟಡಗಳ ಕೊರತೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೪೮೪ (೫೭೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳನ್ನು ನಡೆಸಲು ಕಟ್ಟಡಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ೨೦೧೯–೨೦ ಮತ್ತು ೨೦೨೦–೨೧ನೇ ಸಾಲಿನಲ್ಲಿ ಮಂಜೂರಾಗಿರುವ ಅನುದಾನವೆಷ್ಟು; ಎಷ್ಟು ಅಂಗನವಾಡಿ ಕೇಂದ್ರಗಳನ್ನು ನಿರ್ಮಿಸಲಾಗಿದೆ? (ವಿವರಗಳನ್ನು ಒದಗಿಸುವುದು)

## ಬಿ.ಎಂ.ಟಿ.ಸಿ. ಮತ್ತು ಕೆ.ಎಸ್.ಆರ್.ಟಿ.ಸಿ. ನಷ್ಟದ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೪೮೫ (೫೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊರೋನಾ ಅವಧಿಯಲ್ಲಿ ಬಿ.ಎಂ.ಟಿ.ಸಿ. ಮತ್ತು ಕೆ.ಎಸ್.ಆರ್.ಟಿ.ಸಿ. ಗಳ ನಷ್ಟದ ಪ್ರಮಾಣವನ್ನು ಸರಿದೂಗಿಸಲು ಸಾರಿಗೆ ಇಲಾಖೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು;

(ಆ) ಗ್ರಾಮೀಣ ಭಾಗದ ವಿದ್ಯಾರ್ಥಿ ಸಮೂಹಕ್ಕೆ ತೊಂದರೆಯಾಗದಂತೆ ಕಾರ್ಯಕ್ರಮಗಳನ್ನು ರೂಪಿಸಲಾಗಿದೆಯೇ;

(ಇ) ಕೊರೋನಾ ನಂತರದಲ್ಲಿ ಬಿ.ಎಂ.ಟಿ.ಸಿ. ಮತ್ತು ಕೆ.ಎಸ್.ಆರ್.ಟಿ.ಸಿ. ಸಂಸ್ಥೆಗಳು ಗಳಿಸುತ್ತಿರುವ ಆದಾಯವೆಷ್ಟು ?

## ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕುರಿತು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೮೬(೫೭೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಬಾಗಲಕೋಟೆ ಜಿಲ್ಲೆಯಲ್ಲಿ ಮಂಜೂರಾಗಿರುವ ಯೋಜನೆಗಳಾವುವು;

(ಆ) ಈ ಪೈಕಿ ಸ್ಥಗಿತಗೊಂಡಿರುವ ಮತ್ತು ಪೂರ್ಣಗೊಂಡಿರುವ ಯೋಜನೆಗಳಾವುವು; (ವಿವರಗಳನ್ನು ಒದಗಿಸುವುದು)

(ಇ) ಕುಡಿಯುವ ನೀರಿನ ಕೊರತೆಯನ್ನು ನೀಗಿಸಲು ಹೊಸದಾಗಿ ವಿಶೇಷ ಯೋಜನೆಗಳನ್ನು ರೂಪಿಸಲಾಗಿದೆಯೇ?

## ಎಂ.ಜಿ.ಎನ್.ಆರ್.ಇ.ಜಿ.ಎ., ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೪೮೭ (೫೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಎಂ.ಜಿ.ಎನ್.ಆರ್.ಇ.ಜಿ.ಎ., ಯೋಜನೆಯಡಿ ಕಳೆದ ಮೂರು ವರ್ಷಗಳಿಂದ ರಾಜ್ಯಕ್ಕೆ ಬಿಡುಗಡೆಯಾಗಿರುವ ಅನುದಾನ ಎಷ್ಟು : ಖರ್ಚಾಗಿರುವ ಅನುದಾನ ಎಷ್ಟು : (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ನರೇಗಾ ಯೋಜನೆಯಡಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಬಹುದು, ಅವುಗಳಿಗೆ ನಿಗದಿಪಡಿಸಿರುವ ಮೊತ್ತ ಎಷ್ಟು : (ವಿವರವನ್ನು ನೀಡುವುದು)

(ಇ) ಕೋವಿಡ್‌ನ ಪರಿಣಾಮ ನಗರ ಪ್ರದೇಶಗಳಿಂದ ವಾಪಸ್ಸು ಗ್ರಾಮಗಳಿಗೆ ಹೋದಂತಹ ವಲಸಿಗರಲ್ಲಿ ಎಷ್ಟು ಜನರಿಗೆ ಉದ್ಯೋಗ ಚೀಟಿ ನೀಡಲಾಗಿದೆ; ಇವರುಗಳಲ್ಲಿ ಎಷ್ಟು ಮಂದಿ ನರೇಗಾ ಯೋಜನೆಯಡಿಯಲ್ಲಿ ಕೂಲಿಯನ್ನು ಪಡೆದಿದ್ದಾರೆ ? (ಜಿಲ್ಲಾವಾರು ವಿವರಗಳನ್ನು ನೀಡುವುದು)

## ಪಶು ಭಾಗ್ಯ ಯೋಜನೆಯ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೪೮೮ (೫೮೨) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಪಶು ಭಾಗ್ಯ ಯೋಜನೆಯಡಿಯಲ್ಲಿ ಗುರುತಿಸಲಾಗಿದ್ದ ಫಲಾನುಭವಿಗಳ ಸಂಖ್ಯೆ ಎಷ್ಟು : (ವರ್ಗವಾರು, ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಯೋಜನೆಯ ಸೌಲಭ್ಯವನ್ನು ಪಡೆದ ಫಲಾನುಭವಿಗಳ ಆರ್ಥಿಕ ಮಟ್ಟ ಉತ್ತಮವಾಗಿದೆಯೇ : ಫಲಾನುಭವಿಗಳಿಗೆ ಹೈನೋದ್ಯಮದ ಬಗ್ಗೆ ತಿಳುವಳಿಕೆ ನೀಡಲು ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು ? (ವಿವರವನ್ನು ನೀಡುವುದು)

## ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ, ಅನುದಾನ ಖರ್ಚು ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೪೮೯ (೫೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ;

(ಆ) ಕಳೆದ ಮೂರು (೨೦೧೮-೧೯, ೨೦೧೯-೨೦ ಮತ್ತು ೨೦೨೦-೨೧) ವರ್ಷಗಳಿಂದ ಗ್ರಾಮ ಪಂಚಾಯತಿಗಳಿಗೆ ವಿವಿಧ ಯೋಜನೆಯಡಿಯಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು; ಬಳಕೆಯಾಗಿರುವ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಇ) ಗ್ರಾಮ ಪಂಚಾಯತಿಗಳು ಅನುದಾನದ ಕೊರತೆಯಿಂದ ಗ್ರಾಮಗಳ ಅಭಿವೃದ್ಧಿಗೆ ಹೆಚ್ಚು ಒತ್ತುಕೊಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ರಾಜ್ಯದ ಎಷ್ಟು ಗ್ರಾಮ ಪಂಚಾಯತಿಗಳಲ್ಲಿ ಸಿಬ್ಬಂದಿಯ ಕೊರತೆಯಿದೆ ; ಸಿಬ್ಬಂದಿ ನೇಮಕಾತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರವನ್ನು ನೀಡುವುದು)

## ಕಳೆದ ಒಂದು ವರ್ಷದ ಅವಧಿಯಲ್ಲಿ ಟೋಲ್ ಫೀಸ್ ಮಾಹಿತಿ ಬಗ್ಗೆ

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ)**

೪೯೦ (೫೧೪) ಮಾನ್ಯ ಉಪ ಮುಖ್ಯಮಂತಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಬಸ್‌ಗಳಿಗೆ ಕಳೆದ ಒಂದು ವರ್ಷದಲ್ಲಿ ಎಷ್ಟು ಹಣ ಟೋಲ್ ಫೀಸ್ ಕಟ್ಟಲಾಗಿದೆ ;

(ಆ) ಸಾರಿಗೆ ಇಲಾಖೆಯ ನಾಲ್ಕು ನಿಗಮಗಳು ನಷ್ಟದಲ್ಲಿ ನಡೆಯುತ್ತಿರುವುದು ನಿಜವೇ ;

(ಇ) ಇಲಾಖೆಯಲ್ಲಿ ಅಂತರ ನಿಗಮ ವರ್ಗಾವಣೆಗೆ ಅವಕಾಶ ಕಲ್ಪಿಸುವ ಪ್ರಸ್ತಾಪ ಸರ್ಕಾರದ ಪರಿಶೀಲನೆಯಲ್ಲಿದೆಯೇ ?

(ಈ) ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ೩೭೧ಜೆ ಜಾರಿಯಾದ ಮೇಲೆ ಆ ಭಾಗದಲ್ಲಿ ಎಷ್ಟು ಹುದ್ದೆಗಳನ್ನು ಸಾರಿಗೆ ಇಲಾಖೆಯಲ್ಲಿ ಭರ್ತಿ ಮಾಡಲಾಗಿದೆ ;

(ಉ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಹಿರಿಯ ನಾಗರಿಕರು, ಮಕ್ಕಳ ಮತ್ತು ಮಹಿಳೆಯರ ಸ್ಥಿತಿಗತಿಗಳ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೧ (೫೦೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಹಿರಿಯ ನಾಗರಿಕರು, ಮಕ್ಕಳು ಮತ್ತು ಮಹಿಳೆಯರ ಸ್ಥಿತಿಗತಿಯ ಸಮಾಜದ ಆರೋಗ್ಯವನ್ನು ಸೂಚಿಸುವ ಮಾನದಂಡಗಳ–ಲ್ಲೊಂದಾಗಿದ್ದು, ವೃದ್ಧರನ್ನು ಕೆಟ್ಟದಾಗಿ ನಡೆಸಿಕೊಳ್ಳುತ್ತಿರುವ ರಾಜ್ಯಗಳ ಪಟ್ಟಿಯಲ್ಲಿ ದೇಶದಲ್ಲಿಯೇ ನಮ್ಮ ರಾಜ್ಯ ಎರಡನೇ ಸ್ಥಾನದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಿರಿಯ ನಾಗರಿಕರ ಹಿತಾಸಕ್ತಿ ರಕ್ಷಣೆಗೆ ಅಗತ್ಯವಾದ ಯಾವ ಯಾವ ಕಾರ್ಯತಂತ್ರ ಹಾಗೂ ಯೋಜನೆಗಳನ್ನು ಸರ್ಕಾರ ರೂಪಿಸಿದೆ ? (ವಿವರಗಳನ್ನು ನೀಡುವುದು)

## ಕಾಮಗಾರಿಯಲ್ಲಿ ಅವ್ಯವಹಾರ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೨ (೫೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕೆ.ಆರ್.ಐ.ಡಿ.ಎಲ್ ವತಿಯಿಂದ ಅನೇಕ ಕಾಮಗಾರಿಗಳು ನಡೆಯುತ್ತಿದ್ದು, ಕಳೆದ ೨ ವರ್ಷದಿಂದ ಕಳಪೆ ಕಾಮಗಾರಿ ಕೆಲಸವಾಗಿದ್ದು, ಇದಕ್ಕೆ ಯಾರು ಹೊಣೆ ;

(ಆ) ಕಾರವಾರ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಿಂದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಮಂಜೂರಾಗಿರುವ ಅನುದಾನ ಎಷ್ಟು; (ಕಾಮಗಾರಿ ಮಾಡಿರುವ ಗುತ್ತಿಗೆದಾರರ ಹೆಸರು ಹಾಗೂ ಅವರ ಸಂಪೂರ್ಣ ವಿವರದೊಂದಿಗೆ ವರದಿ ನೀಡುವುದು ಹಾಗೂ ಕಾಮಗಾರಿ ಮಾಡಿರುವ ಸ್ಥಳ, ಅಂದಾಜು ಪತ್ರದ ಪ್ರತಿ, ಎಮ್.ಬಿ.ಪ್ರತಿ, ಕಾಮಗಾರಿ ನಡೆದ ಸ್ಥಳದ ಫೋಟೊ ಪ್ರತಿ ನೀಡುವುದು)

(ಇ) ಕೆ.ಆರ್.ಐ.ಡಿ.ಎಲ್ ವತಿಯಿಂದ ಜಿಲ್ಲೆಯಲ್ಲಿ ಬಹಳಷ್ಟು ಕಾಮಗಾರಿಗಳು ಮಾಡಲು ಸಾಕಷ್ಟು ಅನುದಾನ ಬಂದಿದ್ದು, ಎಲ್ಲಾ ಕಡೆಯಲ್ಲೂ ಕಳಪೆ ಕಾಮಗಾರಿ ಮಾಡಿದ್ದು, ಸಂಬಂಧಿಸಿದ ಅಧಿಕಾರಿ/ಗುತ್ತಿಗೆದಾರರ ಮೇಲೆ ತನಿಖೆ ಮಾಡಿ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಮನೆ–ಮನೆಗೆ ಗಂಗೆ ಯೋಜನೆಯ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೪೯೩ (೫೦೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮನೆ–ಮನೆಗೆ ಗಂಗೆ ಎಂಬ ಯೋಜನೆ ರಾಜ್ಯದಲ್ಲಿ ಜಾರಿಯಲ್ಲಿದೆಯೇ ;

(ಆ) ಈ ಯೋಜನೆಯಡಿ ಈವರೆವಿಗೆ ಎಷ್ಟು ಮನೆಗಳಿಗೆ ನಲ್ಲಿ ಸಂಪರ್ಕ ಕಲ್ಪಿಸಲಾಗಿದೆ ;

(ಇ) ಈ ವರ್ಷ ಒಟ್ಟು ಮನೆಗಳಿಗೆ ನಲ್ಲಿ ಸಂಪರ್ಕ ಕಲ್ಪಿಸುವ ಗುರಿಯನ್ನು ನಿಗದಿಪಡಿಸಲಾಗಿದೆ ? (ಯೋಜನೆಯ ಪೂರ್ಣ ವಿವರವನ್ನು ಒದಗಿಸುವುದು)

## ರಾಜ್ಯದಲ್ಲಿ ಹಕ್ಕಿ ಜ್ವರದ ಸೋಂಕು ಹರಡುತ್ತಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೪ (೫೦೮) ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಕ್ಕಿ ಜ್ವರದ ಸೋಂಕು ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಹಕ್ಕಿ ಜ್ವರ ಕಂಡು ಬಂದಿರುತ್ತದೆ ;

(ಇ) ಹಕ್ಕಿ ಜ್ವರ ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೫ (೫೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಳೆದ ೪ ವರ್ಷಗಳ ಅವಧಿಯಲ್ಲಿನ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ನಿರ್ಮಾಣಗೊಂಡ ರಸ್ತೆಗಳು ಎಷ್ಟು ; (ವಿವರ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಹದಗೆಟ್ಟ ರಸ್ತೆಗಳನ್ನು ಪುನರ್ ನಿರ್ಮಿಸಲು ಯಾವುದಾದರೂ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆಯೇ ;

(ಇ) ಯಾವ ಕಾಲಾಮಿತಿಯೊಳಗೆ ಈ ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗುವುದು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಖಾಲಿ ಇರುವ ಪಿ.ಡಿ.ಓ.ಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೬ (೫೧೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಓ)ಗಳ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಜಾಗದಲ್ಲಿ ಪ್ರಭಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಪಂಚಾಯಿತಿ ಸಿಬ್ಬಂದಿಗಳಾದ ದ್ವಿತೀಯ ದರ್ಜೆ ಲೆಕ್ಕ ಸಹಾಯಕ/ ಕಾರ್ಯದರ್ಶಿ ಗ್ರೇಡ್–೨ ಇವರುಗಳಿಗೆ ಪ್ರಭಾರ ನೀಡುವ ಬಗ್ಗೆ ೨೦೧೪ರಲ್ಲಿ ಆದೇಶ ಹೊರಡಿಸಲಾದ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಹೆಗ್ಗಡದೇವನ ಕೋಟೆಯಿಂದ ಮೈಸೂರಿಗೆ ಹೆಚ್ಚಿನ ಬಸ್ ಸೌಲಭ್ಯ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೯೭ (೫೨೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೆಗ್ಗಡದೇವನ ಕೋಟೆಯಿಂದ ಮೈಸೂರಿಗೆ ಬೆಳಿಗ್ಗೆ ೭ ರಿಂದ ೧೦ ಮತ್ತು ಮೈಸೂರಿನಿಂದ ಹೆಗ್ಗಡದೇವನ ಕೋಟೆಗೆ ಸಂಜೆ ೪ ರಿಂದ ೭ ರವರೆಗೆ ಹೆಚ್ಚಿನ ಬಸ್ ಸೌಲಭ್ಯ ಕಲ್ಪಿಸಿ, ವಿದ್ಯಾರ್ಥಿಗಳು, ಸರ್ಕಾರಿ ನೌಕರರು, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲು ಸರ್ಕಾರ ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಕರೋನ ಪರಿಸ್ಥಿತಿಯ ಕಾರಣ ಹೆಗ್ಗಡದೇವನ ಕೋಟೆ ಬಸ್ ಡಿಪೋನಿಂದ ಹಲವೆಡೆಗೆ ಹೋಗುವ ಗ್ರಾಮೀಣ ಬಸ್ ಸೌಲಭ್ಯ ಸ್ಥಗಿತವಾಗಿತ್ತೆ ; ಈ ರೀತಿ ಸ್ಥಗಿತಗೊಂಡಿದ್ದ ಗ್ರಾಮೀಣ ಬಸ್ ಮಾರ್ಗಗಳಲ್ಲಿ ಬಸ್ ಸಂಚಾರವನ್ನು ಪುನರಾರಂಭ ಮಾಡಿ ಗ್ರಾಮೀಣ ಜನತೆಗೆ, ಶಾಲಾ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ ;

(ಇ) ಈ ಬಗ್ಗೆ ಸಾರ್ವಜನಿಕರು, ವಿದ್ಯಾರ್ಥಿಗಳು ಒತ್ತಾಯ ಮಾಡಿರುವುದು ಸಂಸ್ಥೆಯ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪರಿಶೀಲಿಸಿ ಕೂಡಲೇ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ ?

## ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ನೇಮಕಾತಿ ಹಾಗೂ ಸೇವೆಯ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೮ (೫೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಸರ್ಕಾರ ತಯಾರು ಮಾಡಿದೆಯೇ ; (ಪಟ್ಟಿಯನ್ನು ನೀಡುವುದು)

(ಆ) ಪಿ.ಡಿ.ಓ.ಗಳ ನೇಮಕಾತಿಗೆ ಸಂಬಂಧಪಟ್ಟಂತೆ, ತಾತ್ಕಾಲಿಕ ಆಯ್ಕೆ ಪಟ್ಟಿ ಹಾಗೂ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸದಿರಲು ಕರ್ನಾಟಕ ಆಡಳಿತ ನ್ಯಾಯ ಮಂಡಳಿ ಹಾಗೂ ಹೈಕೋರ್ಟ್ ತಡೆಯಾಜ್ಞೆ ನೀಡಿದೆಯೇ ; (ಆದೇಶದ ಪ್ರತಿಗಳನ್ನು ನೀಡುವುದು)

(ಇ) ಪಿ.ಡಿ.ಓ.ಗಳ (ನೇರ ನೇಮಕಾತಿ) ಅಂತಿಮ ಆಯ್ಕೆ ಪಟ್ಟಿಯನ್ನು ಒಂದೇ ದಿನಾಂಕದಂದು ಪ್ರಕಟಿಸುವ ಬಗ್ಗೆ ಸರ್ಕಾರ ತೀರ್ಮಾನಿಸಿದ ಬಗ್ಗೆ ದಾಖಲೆ ನೀಡುವುದು ;

(ಈ) ರದ್ದಾದ ಹಿಂದಿನ ವಿಸ್ತರಣಾಧಿಕಾರಿಗಳ ಸೇವಾ ಅವಧಿಯನ್ನು ಪರಿಗಣಿಸಿ ಪಿ.ಡಿ.ಓ. ಗಳ ಜೇಷ್ಠತಾ ಪಟ್ಟಿಯಲ್ಲಿ ಮೇಲಿನ ಸ್ಥಾನ ನೀಡಲು ಅವಕಾಶ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆಯೇ ; (ನೇಮಕಾತಿ ನಿಯಮ, ಸರ್ಕಾರ ಆದೇಶ ಅಥವಾ ಕಾಯ್ದೆ ಹಾಗೂ ನ್ಯಾಯಾಲಯದ ಆದೇಶಗಳು ಇದ್ದಲ್ಲಿ, ಒದಗಿಸುವುದು)

(ಉ) ಪಿ.ಡಿ.ಓ. ಸಹಾಯಕ ನಿರ್ದೇಶಕರು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳ ಜೇಷ್ಠತಾ ಪಟ್ಟಿ ಮತ್ತು ಪದೋನ್ನತಿಗೆ ಸಂಬಂಧಪಟ್ಟಂತೆ, ಯಾವುದಾದರೂ ನ್ಯಾಯಾಲಯಗಳಲ್ಲಿ ಪ್ರಕರಣಗಳು ದಾಖಲಾಗಿದೆಯೇ ? (ಪ್ರಕರಣಗಳ ಸಂಖ್ಯೆ ಮತ್ತು ದಾಖಲೆಗಳ ಸಹಿತ ಮಾಹಿತಿ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0136/400 ಪ್ರತಿಗಳು/30–01–2021